# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

| ಸಂಪುಟ – 01<br>Volume - 01 | ಸಂಚಿಕೆ – 144<br>Issue - 144 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269<br>Title- Code: KARKAN 28269 | ಚಿತ್ರದುರ್ಗ<br>Chitradurga | ದಿನಾಂಕ: 20–12–2023 ಬುಧವಾರ<br>Date: 20-12-2023 Wednesday | ಪುಟ: 4<br>Page: 4 | ಬೆಲೆ : ರೂ.2–00<br>Price: Rs. 2-00 |
|---|---|---|---|---|---|---|



**ಒಳಪುಟದ ಸುದ್ದಿಗಳು**

- ಟಾಟಾಏಸ್‌ನಲ್ಲಿ ಸಿಂಧಿಹಸು ಕಳ್ಳತನ: ಚೇಸ್ ಮಾಡಿ ಹಸು ರಕ್ಷಿಸಿದ ಮಾಲೀಕ 2
- ನಗರಸಭೆ ಸದಸ್ಯರ ಸದಸ್ಯತ್ವ ರದ್ದುಗೊಳಿಸಲು ಆಗ್ರಹ 3
- ಅರ್ಹರನ್ನು ಗುರುತಿಸಿ, ಬಗರ್ ಹುಕ್ಕುಂ ಜಮೀನು ನೀಡಿ: ಗೋವಿಂದಪ್ಪ 4



ಸುದ್ದಿ, ಜಾಹಿರಾತಿಗೆ
9686622252


**ಶುಭ ನುಡಿ**

ಗುರಿ ತಲಪುವ ದಾರಿ ದೂರವಿದ್ದಾಗ.
ನಿನ್ನ ವೇಗ ಜಾಸ್ತಿ ಆಗಬೇಕೇ
ಹೊರತು ಗುರಿ ಚಿಕ್ಕದಾಗಬಾರದು

» ಶುಭೋದಯ

### ದುರ್ಗಾ ಇಲೆವೆನ್ ಕ್ರಿಕೇಟರ್ಸ್ ನೇತೃತ್ವದಲ್ಲಿ ಇಂದಿನಿಂದ

# ಕೋಟೆ ನಾಡಿನಲ್ಲಿ ರಾಜ್ಯ ಮಟ್ಟದ ಹೊನಲು ಬೆಳಕಿನ ಕ್ರಿಕೆಟ್ ಪಂದ್ಯಾವಳಿ

» **ಚಿತ್ರದುರ್ಗ**

ದುರ್ಗಾ ಇಲೆವೆನ್ ಕ್ರಿಕ್ರೇಟರ್ಸ್ ಚಿತ್ರದುರ್ಗ ವತಿಯಿಂದ ಸತತವಾಗಿ 8 ಬಾರಿ ದಸರಾ ಅಂಬಾರಿಯನ್ನು ಹೊತ್ತ ಆನೆ ಅರ್ಜುನ ಸ್ಮರಣಾರ್ಥವಾಗಿ " ಅರ್ಜುನ ಕಪ್–2023" ರನ್ನು ಇದೇ ಡಿಸೆಂಬರ್ 20 ರಿಂದ 24 ರವರೆಗೆ ನಗರದ ಹಳೇ ಮಾಧ್ಯಮಿಕ ಶಾಲಾ ಆವರಣ( ಮದಕರಿ ಮೈದಾನ) ದಲ್ಲಿ ಹೊನಲು ಬೆಳಕಿನ ರಾಜ್ಯ ಮಟ್ಟದ ಟೆನಿಸ್ ಬಾಲ್ ಕ್ರಿಕೆಟ್ ಪಂದ್ಯಾವಳಿಯನ್ನು ಹಮ್ಮಿಕೊಳ್ಳಲಾಗಿದೆ ಎಂದು ನಗರಸಭೆ ಮಾಜಿ ಆಧ್ಯಕ್ಷರು ಮತ್ತು ಕ್ರಿಕೇಟ್ ಪಂದ್ಯಾವಳಿ ಆಯೋಜಕರಾದ ಬಿ.ಕಾಂತರಾಜ್ ತಿಳಿಸಿದರು.

ನಗರದ ಹಳೇ ಮಾಧ್ಯಮಿಕ ಶಾಲಾ ಆವರಣದಲ್ಲಿ ಕ್ರಿಕೆಟ್ ಪಂದ್ಯಾವಳಿ ಕುರಿತು ಸುದ್ದಿಗೋಷ್ಟಿ ಉದ್ದೇಶಿಸಿ ಮಾತನಾಡಿ ಅನೇಕ ಗಣ್ಯರು, ಸಿನಿಮಾ ನಟರ ಹೆಸರಿನಲ್ಲಿ ಸ್ಮರಣಾರ್ಥ ಕ್ರಿಕೇಟ್ ಪಂದ್ಯಾವಳಿಗಳನ್ನು ಎಲ್ಲಾ ಕಡೆ ಮಾಡುತ್ತಾರೆ. ಆದರೆ ನಾವುಗಳು ರಾಜ್ಯದ ಇತಿಹಾಸ ಹೊಂದಿರುವ ಮೈಸೂರು ದಸಾರ ಅಂಬಾರಿ ಹೊತ್ತಂತಹ ಅರ್ಜುನ ಎಂಬ ಆನೆಯ ಹೆಸರಿನಲ್ಲಿ ಅದರ ನೆನಪಿಗಾಗಿ ಸ್ಮರಣಾರ್ಥ ಕ್ರಿಕೇಟ್ ಪಂದ್ಯಾವಳಿಯನ್ನು ರಾಜ್ಯದಲ್ಲಿಯೇ ಪ್ರಥಮವಾಗಿ ಹಮ್ಮಿಕೊಂಡಿದ್ದೇವೆ.

ಇದು ಹೊನಲು ಬೆಳಕಿನ ಪಂದ್ಯಾವಳಿಯಾಗಿದ್ದು ದ್ವಿತೀಯ ಬಾರಿಗೆ ರಾಜ್ಯ ಮಟ್ಟದ ಟೆನ್ನಿಸ್ ಬಾಲ್ ಹೊನಲು–ಬೆಳಕಿನ ಕ್ರಿಕೆಟ್ ಟೂರ್ನಮೆಂಟನ್ನು ಆಯೋಜಿಸಲಾಗಿದ್ದು ಈಗಾಗಲೇ 35 ತಂಡಗಳು ಹೆಸರನ್ನು ನೊಂದಣಿ ಮಾಡಿಕೊಂಡಿದ್ದಾರೆ. ಆದರೆ ಈ ರಾಜ್ಯದ ಮಟ್ಟದ ಪಂದ್ಯಾವಾದರೂ ಸಹ ಇಲ್ಲಿಗೆ ಚೆನ್ನೈನ ಒಂದು ತಂಡ ಸಹ ಆಡಲು ಆಸಕ್ತಿ ತೋರಿ ನೊಂದಣಿ ಮಾಡಿಕೊಂಡಿದ್ದಾರೆ.

ಈ ಪಂದ್ಯಾವಳಿಯಲ್ಲಿ ಉತ್ತಮ ಬ್ಯಾಟ್ಮನ್, ಉತ್ತಮ ಬೌಲರ್ ಹಾಗೂ ಸರಣಿ ಶ್ರೇಷ್ಠ ಪ್ರಶಸ್ತಿಯನ್ನು ನೀಡಲಾಗುವುದು. ಈ ಪಂದ್ಯಾವಳಿಯೂ ಆನೆ ಅರ್ಜುನ ಮಾತ್ರವಲ್ಲದೆ ಬಲರಾಮ ಮತ್ತು ದ್ರೋಣರ ಹೆಸರನ್ನು ಸಹ ಇದೇ ಸಂದರ್ಭದಲ್ಲಿ ಸ್ಮರಿಸಲಾಗುತ್ತದೆ ಡಿ. 20 ರ ಸಂಜೆ 6–30 ಕ್ಕೆ ಚಿತ್ರದುರ್ಗ ಶಾಸಕ ಕೆ.ಸಿ.ವಿರೇಂದ್ರ ಪಪ್ಪಿ ಅವರು ಪಂದ್ಯಾವಳಿ ಉದ್ಘಾಟನೆ ಮಾಡಲಿದ್ದಾರೆ.

ಅರ್ಜುನ ಆನೆಯ ಮಾವುತರಾದ ವಿನೂತ ಅವರನ್ನು ಡಿ.24 ರಂದು ಆಹ್ವಾನ ನೀಡಲಾಗಿದೆ. ಅವರನ್ನು ನಮ್ಮ ತಂಡದ ವತಿಯಿಂದ ಗೌರವ ಸನ್ಮಾನ ಮಾಡಿ ನಮ್ಮ ಕೈಲಾದ ಸಹಾಯವನ್ನು ಮಾಡಲಾಗುವುದು ಎಂದರು.

ಡಿ.23 ರಂದು ಮೈಸೂರಿನ ಧರ್ಮೆಂದ್ರ ಕುಮಾರ್ ರವರಿಂದ ಆನೆಗಳ ಬಗ್ಗೆ ಚಿತ್ರದುರ್ಗದ ಜನತೆಗೆ ಮಾಹಿತಿಯನ್ನು ನೀಡಲಿದ್ದಾರೆ.

ಡಿ. 24 ರಂದು ಸಮಾರೋಪ ಸಮಾರಂಭದಲ್ಲಿ ಆರಣ್ಯ ಸಚಿವರಾದ ಈಶ್ವರ ಖಂಡ್ರೆ,ಜಿಲ್ಲಾ ಉಸ್ತುವಾರಿ ಸಚಿವರು, ಜಿಲ್ಲೆಯ ಶಾಸಕರು ಭಾಗವಹಿಸಲಿದ್ದಾರೆ ಅಂದು ವಿವಿಧ ಕ್ಷೇತ್ರದಲ್ಲಿ ಸಾಧನೆಯನ್ನು ಮಾಡಿದ ಗಣ್ಯರನ್ನು ವೇದಿಕೆಯಲ್ಲಿ ಸನ್ಮಾನಿಸಲಾಗುವುದೆಂದು ಕಾಂತರಾಜ್ ತಿಳಿಸಿದರು.

ಈ ಪಂದ್ಯಾವಳಿಯಲ್ಲಿ ಗೆಲುವು ಸಾಧಿಸಿದ ತಂಡಕ್ಕೆ ಪ್ರಥಮ ಬಹುಮಾನ ಅರ್ಜುನ ಟ್ರೋಫಿ ಮತ್ತು 2 ಲಕ್ಷ , ದ್ವಿತೀಯ ಬಹುಮಾನ ಬಲರಾಮ ಟ್ರೋಫಿ ಮತ್ತು 1 ಲಕ್ಷ ರೂ ಹಾಗೂ ತೃತೀಯ ಸ್ಥಾನಗಳಿಸಿದ ತಂಡಕ್ಕೆ ದ್ರೋಣ ಟ್ರೋಫಿ 50 ಸಾವಿರ ಬಹುಮಾನ ನೀಡಲಾಗುವುದು. ಪಂದ್ಯಾವಳಿಯನ್ನು ವೀಕ್ಷಿಸಲು ಆಗಮಿಸುವ ಕ್ರೀಡಾ ಪ್ರೇಮಿಗಳಿಗೆ ಉತ್ತಮವಾದ ಆಸನದ ವ್ಯವಸ್ಥೆಯನ್ನು ಮಾಡಲಾಗಿದೆ. ಮೂರು ಕಡೆಯಲ್ಲಿ ಸ್ಟೇಜ್ ವ್ಯವಸ್ಥೆ ಮಾಡಲಾಗುತ್ತದೆ. ಅಂಪೈರ್‌ಗಳ ಮತ್ತು ಕಾಮಿಟರಿ ತಂಡವನ್ನು ಹೊರಗಡೆಯಿಂದ ಕರೆಸಲಾಗುತ್ತದೆ ಎಂದರು. ಪತ್ರಿಕಾ ಗೋಷ್ಠಿಯಲ್ಲಿ

ಉದ್ಯಮಿಗಳು ಮತ್ತು ಆಯೋಕರಾದ ಸುರೇಶ್ ಬಾಬು, ವೀರಶೈವ ಮುಖಂಡರಾದ ಪರಮೇಶ್ (ಕಾಫಿಪುಡಿ), ಗೋಪಾಲಸ್ವಾಮಿ ನಾಯಕ್ , ಸಿದ್ದೇಶ್ ಸೇರಿದಂತೆ ಇತರರು ಭಾಗವಹಿಸಿದ್ದರು.





**ಪಂದ್ಯದ ನಿಯಮಗಳು**



1. ಪ್ರತಿ ಪಂದ್ಯಕ್ಕೂ 6 ಓವರ್ ಸೀಮಿತ ಸಮಯದ ಅಭಾವ ಬಂದಾಗ ಓವರ್ ಕಡಿತಗೊಳಿಸಲಾಗುವುದು.
2. ಅಂಪೈರ್ ತೀರ್ಮಾನವೇ ಅಂತಿಮ ತೀರ್ಮಾನವಾಗಿರುತ್ತದೆ.
3. ಯಾವುದೇ ತಂಡ ಗಲಾಟೆ ಮಾಡಿದಲ್ಲಿ ಆ ತಂಡವನ್ನು ಟೂರ್ನಿಯಿಂದ ಹೊರಹಾಕಲಾಗುವುದು.
4. ಒಂದು ತಂಡದಲ್ಲಿ ಆಡಿದಂತಹ ಆಟಗಾರ ಇನ್ನೊಂದು ತಂಡದಲ್ಲಿ ಆಡುವಂತಿಲ್ಲ.
5. ಈ ಟೂರ್ನಿಯಲ್ಲಿ ಮೊದಲ 2 ಓವರ್‌ಗಳು ಪವರ್ ಪ್ಲೇ ಇರುತ್ತದೆ.

**ಪ್ರಥಮ ಬಹುಮಾನ, ಅರ್ಜುನ ಟ್ರೋಫಿ**
₹ 2,00.001

**ದ್ವಿತೀಯ ಬಹುಮಾನ, ಬಲರಾಮ ಟ್ರೋಫಿ**
₹ 1.00.001

**ತೃತೀಯ ಬಹುಮಾನ, ದ್ರೋಣ ಟ್ರೋಪಿ**
₹ 50.001



ಜಿಲ್ಲೆಯ ಎಲ್ಲಾ ಕ್ರಿಕೆಟ್ ಅಭಿಮಾನಿಗಳು ಕ್ರೀಡಾಕೂಟದಲ್ಲಿ ಭಾಗವಹಿಸಿ ಆಟಗಾರರಿಗೆ ಪ್ರೋತ್ಸಾಹ ನೀಡಬೇಕು. ಪಂದ್ಯಾವಳಿ ಸಮಯ ನಿಗದಿಯಂತೆ ಎಲ್ಲಾ ನಡೆಯುತ್ತದೆ. ಎಲ್ಲಾ ಆಟಗಾರರು ಆಯೋಜಕರ ಮತ್ತು ಅಂಪೈರ್ ತಿರ್ಮಾನ ಅಂತಿನವಾಗಿರುತ್ತದೆ. ಸೋಲು ಗೆಲುವನ್ನು ಎಲ್ಲಾ ಆಟಗಾರರು ಸಮಾನವಾಗಿ ಸ್ವೀಕರಿಸಿ ಕ್ರೀಡೆಯನ್ನು ಆನಂದಿಸಿ.

» **ಬಿ.ಕಾಂತರಾಜದ ಮಾಜಿ ನಗರಸಭೆ ಅಧ್ಯಕ್ಷರು ಮತ್ತು ಆಯೋಜಕರು**

## ಫಾಸ್ಟ್ ನ್ಯೂಸ್

### ಲೋಕಸಭಾ ಚುನಾವಣೆ: ಸ್ಥಳೀಯರಿಗೆ ಟಿಕೆಟ್ ಕೊಟ್ಟರೆ ಗೆಲುವು ನಿಶ್ಚಿತ

» **ನಾಯಕನಹಟ್ಟಿ**



ರಾಜ್ಯದಲ್ಲಿ ಲೋಕ ಸಭಾ ಕ್ಷೇತ್ರದ ಐದು.ಮೀಸಲು ಕ್ಷೇತ್ರ ವಿದ್ದು ಅದರಲ್ಲಿ ಬೋವಿ ಜನಾಂಗಕ್ಕೆ ಒಂದು ಟಿಕೆಟ್ ಕೊಡಿ ಎಂದು ಎನ್.ದೇವರಳ್ಳಿ ಗ್ರಾಮ ಪಂಚಾಯತಿ ಮಾಜಿ ಅಧ್ಯಕ್ಷರು ಮತ್ತು ಹಾಲಿ ಸದಸ್ಯರು ಟಿ. ಕಾಟಯ್ಯ ಹೇಳಿದ್ದಾರೆ. ಚಳ್ಳಕೆರೆ ತಾಲೂಕಿನ ಚಿತ್ರದುರ್ಗ ಜಿಲ್ಲೆಯ ನಾಯಕನಹಟ್ಟಿ ಹೋಬಳಿಯ ವರವು ಗ್ರಾಮದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು ಮುಂಬರುವ ಲೋಕಸಭಾ ಚುನಾವಣೆಯಲ್ಲಿ ಸ್ಥಳೀಯರಿಗೆ ಟಿಕೆಟ್ ಕೊಟ್ಟರೆ ಗೆಲುವು ನಿಶ್ಚಿತ ಎಂದರು ಕೆ,ಪಿ,ಸಿ,ಸಿ ಪ್ರಧಾನ ಕಾರ್ಯದರ್ಶಿ ನೇರಲಗುಂಟೆ ಎಮ್ ರಾಮಪ್ಪನವರು ಸುಮಾರು 20 ವರ್ಷಗಳಿಂದ ಕಾಂಗ್ರೆಸ್ ಪಕ್ಷಕ್ಕಾಗಿ ದುಡಿದಿದ್ದಾರೆ. ಅವರಿಗೆ ಟಿಕೆಟ್ ಕೊಟ್ಟರೆ ಗೆಲುವು ಖಚಿತ ಎಂದರು. ಸ್ಥಳೀಯವರಿಗೆ ಟಿಕೆಟ್ ಕೊಟ್ಟರೆ ನಮ್ಮ ಕಷ್ಟ,ಸುಖಕ್ಕೆ ,ಸ್ಪಂದಿಸುತ್ತಾರೆ ಎಂದು ನೇರವಾಗಿ ಮಾತನಾಡಿದರು. ಚಿತ್ರದುರ್ಗ ಜಿಲ್ಲೆ ಯಲ್ಲಿ ಬೋವಿ ಜಂಗದವರು ಅತೀ ಹೆಚ್ಚು ಜನಾಂಗದವರು ಇದ್ದಾರೆ. ಅದರಲ್ಲಿ ಏಳು ಕ್ಷೇತ್ರದ ಶಾಸಕರು ಸಹ ಅವರಿಗೆ ಚಿರಪರಿಚಿತರಾಗಿದ್ದಾರೆ. ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಎಮ್. ರಾಮಪ್ಪ ವಿವಿಧ ಪಂಚಾಯತಿಗಳಲ್ಲಿ ಪಕ್ಷಕ್ಕಾಗಿ ಸಂಘಟನೆ ಮಾಡಿದ್ದಾರೆ ಅಧ್ಯಕ್ಷರು ಉಪಾಧ್ಯಕ್ಷರು ಗ್ರಾಮ ಪಂಚಾಯತಿ ಸದಸ್ಯರುಗಳು ಬೇಟಿ ಮಾಡಿದ್ದಾರೆ. ಮುಂಬರುವ 2024ರ ಲೋಕಸಭಾ ಚುನಾವಣೆಯಲ್ಲಿ ಎಮ್.ರಾಮಪ್ಪನ ಅವರು ಅರ್ಜಿ ಹಾಕಿದ್ದಾರೆ. ಚಿತ್ರದುರ್ಗ ಲೋಕಸಭಾ ಕ್ಷೇತ್ರದ ವೀಕ್ಷಕರಾದ ಮಹಾದೇವಪ್ಪ ಅವರಿಗೆ ಟಿಕೆಟ್ ಕೊಡಬೇಕೆಂದು ಮನವಿ ಮಾಡಿದ್ದಾರೆ. ಕಾಂಗ್ರೆಸ್ ಹೈಕಮಾಂಡ್ ಟಿಕೇಟ್ ಕೊಡುವ ನಿರೀಕ್ಷೆ ಇದೆ ಎಂದು ಅವರು ಮಾತನಾಡಿದರು

### ತಿಂಗಳಿಗೊಂದು ದಿನ ಬಾಲಕಾರ್ಮಿಕರ ಅನಿರೀಕ್ಷಿತ ದಾಳಿ ಕೈಗೊಳ್ಳಿ: ತಹಶೀಲ್ದಾರ್ ಸೂಚನೆ

» **ಚಿತ್ರದುರ್ಗ**

ಬಾಲ ಕಾರ್ಮಿಕರ ಹೋಬಳಿವಾರು ಟಾಸ್ಕ್ ಫೋರ್ಸ್ ಕಮಿಟಿ ರಚಿಸಲಾಗಿದ್ದು, ಈ ಸಮಿತಿ ಅಧಿಕಾರಿಗಳು ತಿಂಗಳಿಗೊಂದು ದಿನ ಬಾಲ ಕಾರ್ಮಿಕರ ಅನಿರೀಕ್ಷಿತ ದಾಳಿ ಕೈಗೊಳ್ಳಬೇಕು ಎಂದು ಹಿರಿಯೂರು ತಹಶೀಲ್ದಾರ್ ರಾಜೇಶ್ ಕುಮಾರ್ ಅಧಿಕಾರಿಗಳಿಗೆ ಸೂಚನೆ ನೀಡಿದರು. ಹಿರಿಯೂರು ತಾಲ್ಲೂಕು ಕಚೇರಿ ಸಭಾಂಗಣದಲ್ಲಿ ಮಂಗಳವಾರ ತಾಲ್ಲೂಕು ಬಾಲ ಕಾರ್ಮಿಕ ಟಾಸ್ಕ್ ಫೋರ್ಸ್ ಹಾಗೂ ಕಾರ್ಯಕಾರಿ ಸಮಿತಿ ಸಭೆಯ ಅಧ್ಯಕ್ಷತೆವಹಿಸಿ ಅವರು ಮಾತನಾಡಿದರು. ತಂಡದ ವ್ಯಾಪ್ತಿಯಲ್ಲಿ ಬರುವ, ಬಾರ್, ರೆಸ್ಟೋರೆಂಟ್, ಗ್ಯಾರೇಜ್, ಕಟ್ಟಡ ನಿರ್ಮಾಣ, ಪೌಲ್ಟ್ರಿಫಾರಂನಲ್ಲಿ ಅನಿರೀಕ್ಷಿತ ದಾಳಿಯನ್ನು ನಡೆಸಿ, ಬಾಲ ಕಾರ್ಮಿಕ ಮಕ್ಕಳು ಕಂಡುಬಂದರೆ ತಕ್ಷಣ ತಪ್ಪಿತಸ್ಥ ಮಾಲೀಕರಿಗೆ ಕ್ರಮ ಕೈಗೊಳ್ಳುವಂತೆ ನಿರ್ದೇಶನ ನೀಡಿದರು.ಸಭೆಯಲ್ಲಿ ತಾಲ್ಲೂಕು ಮಟ್ಟದ ಅಧಿಕಾರಿಗಳಾದ ನಗರಸಭೆ ಪೌರಾಯುಕ್ತ ಮಹಂತೇಶ್, ಕಾರ್ಮಿಕ ನಿರೀಕ್ಷಕ ಅಲ್ಲಾಭಕ್ಷ್, ಬಾಲ ಕಾರ್ಮಿಕ ಯೋಜನೆ ಯೋಜನಾ ನಿರ್ದೇಶಕ ಪಿ.ಸತೀಶ್ ಕುಮಾರ್, ಶಿಕ್ಷಣ ಇಲಾಖೆ ಅಧಿಕಾರಿ ಕೆ.ಎಂ. ಮನೋಹರ್, ಸಹಾಯಕ ಶಿಶು ಅಭಿವೃದ್ಧಿ ಯೋಜನಾಧಿಕಾರಿ ಸುಧೀರ್ ಸೇರಿದಂತೆ ವಿವಿಧ ಇಲಾಖೆಯ ತಾಲ್ಲೂಕು ಮಟ್ಟದ ಅಧಿಕಾರಿಗಳು ಹಾಜರಿದ್ದರು.

## ಪ್ರಮುಖ ಸುದ್ದಿ

### 40 ವರ್ಷ ಪೂರೈಸಿದ ದೇವರಾಜ್ ಅರಸ್ ಶಿಕ್ಷಣ ಸಂಸ್ಥೆ

# ನಾಳೆಯಿಂದ 24ರವರೆಗೆ ಡೆಸ್ಟಿನಿ–2023 ಸಂಭ್ರಮ

» **ಚಿತ್ರದುರ್ಗ**

ಹಣಕ್ಕಾಗಿ ಶಿಕ್ಷಣ ಸಂಸ್ಥೆಯನ್ನು ಸ್ಥಾಪಿಸದೆ ಸಮಾಜ ಸೇವೆಯನ್ನು ಮಾಡುವುದಕ್ಕೆ ಬಡವರು ಸಹ ಶಿಕ್ಷಣವನ್ನು ಕಲಿಯಲಿ ಎಂಬ ಉದ್ದೇಶದಿಂದ ಶಿಕ್ಷಣ ಸಂಸ್ಥೆಯನ್ನು ಸ್ಥಾಪನೆ ಮಾಡಿದ್ದೇನೆ ಎಂದು ದೇವರಾಜ್ ಅರಸ್ ಶಿಕ್ಷಣ ಸಂಸ್ಥೆ ಸಂಸ್ಥಾಪಕ ಕಾರ್ಯದರ್ಶಿ ಹಾಗು ಹೊಳಲ್ಕೆರೆ ಕ್ಷೇತ್ರದ ಶಾಸಕ ಡಾ.ಎಂ.ಚಂದ್ರಪ್ಪ ತಿಳಿಸಿದರು.

ಚಿತ್ರದುರ್ಗ ನಗರದ ದೇವರಾಜ್ ಅರಸ್ ಶಿಕ್ಷಣ ಸಂಸ್ಥೆಯ ಸಂಸ್ಥೆಯ ಆವರಣದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಆವರು, 1983ರಲ್ಲಿ ಶಿಕ್ಷಣ ಸಂಸ್ಥೆಯನ್ನು ಪ್ರಾರಂಭ ಮಾಡಿ ಇಲ್ಲಿಯವರೆಗೂ ಪ್ರಾಥಮಿಕ ಶಾಲೆ, ಪ್ರೌಢಶಾಲೆ, ಪದವಿ ಪೂರ್ವ ಕಾಲೇಜು, ಪದವಿ ಕಾಲೇಜು, ಶಿಕ್ಷಕರ ತರಬೇತಿ ಕಾಲೇಜು, ನರ್ಸಿಂಗ್ ಕಾಲೇಜು, ಫಾರ್ಮಸಿ ಕಾಲೇಜು ಹಾಗೂ ಆರ್ಯುವೇದ ವೈದ್ಯಕೀಯ ಕಾಲೇಜನ್ನು ಪ್ರಾರಂಭ ಮಾಡಲಾಗಿದೆ. ಇದರಲ್ಲಿ ಸ್ವೇಟ್ ಮತ್ತು ಸಿಬಿಎಸ್‌ಸಿ ತರಗತಿ ನಡೆಸಲಾಗುತ್ತಿದೆ ಎಂದರು.1989ರಲ್ಲಿ ನೂತನವಾಗಿ ಕಟ್ಟಡವನ್ನು ನಿರ್ಮಾಣ ಮಾಡಿ ಮಕ್ಕಳ ಕಲಿಗೆ ಅವಕಾಶವನ್ನು ಕಲ್ಪಿಸಲಾಯಿತು. ನನಗೆ ಬೆಂಗಳೂರಿನಲ್ಲಿಯೂ ಉತ್ತಮವಾದ ಜಾಗ ಸಿಕ್ಕಿತ್ತು ಅಲ್ಲಿಯೂ ಸಹಾ ಶಾಲೆಯನ್ನು ಪ್ರಾರಂಭ ಮಾಡುವಂತೆ ಹಲವಾರು ಹೇಳಿದ್ದರು. ಆದರೆ ನನಗೆ ನನ್ನ ಊರು, ನನ್ನ ಜನ ಎಂಬ ಆಭಿಮಾನದಿಂದ ಇಲ್ಲಿಯ ಮಕ್ಕಳಿಗೆ ಉತ್ತಮವಾದ ಶಿಕ್ಷಣವನ್ನು ನೀಡಬೇಕೆಂಬ ಉದ್ದೇಶದಿಂದ ಇಲ್ಲಿಯೇ ಶಾಲೆಯನ್ನು ಪ್ರಾರಂಭ ಮಾಡಿದೆ. ನಾನು ಹಣಗಳಿಸಬೇಕೆಂಬ ಉದ್ದೇಶ ಇದ್ದಿದ್ದರೆ ಬೆಂಗಳೂರಿನಲ್ಲಿ ಶಾಲೆಯಲ್ಲಿ ಪ್ರಾರಂಭ ಮಾಡುತ್ತಿದ್ದೆ. ಆದರೆ ನನಗೆ ನನ್ನ ಜಿಲ್ಲೆಯ ಮಕ್ಕಳು ಶಿಕ್ಷಣವನ್ನು ಪಡೆಯಬೇಕೆಂಬ ಉದ್ದೇಶದಿಂದ ನನ್ನ ಊರಿನಲ್ಲಿಯೇ ಶಾಲೆಯನ್ನು ಪ್ರಾರಂಭ ಮಾಡಿದೆ. ಸೇವಾ ಮನೋಭಾವದಿಂದ ಈ ಕೆಲಸವನ್ನು ಮಾಡುತ್ತಿದ್ದೇನೆ ಹೊರತು ಹಣಕ್ಕಾಗಿ ಅಲ್ಲ ಎಂದು ತಿಳಿಸಿದರು.




ನನ್ನ ಶಿಕ್ಷಣ ಸಂಸ್ಥೆ ದಿನದಿಂದ ದಿನಕ್ಕೆ ಪ್ರಗತಿಯನ್ನು ಕಾಣುತ್ತಿದೆ. ದಾವಣಗೆರೆ ವಿವಿಯ ಬಿ.ಕಾ.ಂನಲ್ಲಿ ಪ್ರಥಮ ರ್‍ಯಾಂಕ್‌ನ್ನು ನಮ್ಮ ಶಾಲೆಯ ವಿದ್ಯಾರ್ಥಿ ಪಡೆದಿದ್ದಾರೆ. ಗುಣಮಟ್ಟದ ಶಿಕ್ಷಣಕ್ಕೆ ಒತ್ತು ನೀಡುವುದರ ಮೂಲಕ 5,000 ಮಕ್ಕಳು ನಮ್ಮ ಶಾಲೆಯಲ್ಲಿ ಕಲಿಯುತ್ತಿದ್ದಾರೆ. ಶಿಕ್ಷಕರು ಸೇರಿದಂತೆ 500 ರಿಂದ 600 ಜನ ಕೆಲಸ ಮಾಡುತ್ತಿದ್ದಾರೆ. ಎಲ್ಲರು ಸಹಾ ಕುಟುಂಬ ರೀತಿಯಲ್ಲಿ ಇದ್ದಾರೆ. ಒಂದೇ ಮನೆಯ ವಾತಾವರಣ ನಮ್ಮಲ್ಲಿ ಇದೆ. ವಿಶ್ವಾಸದಿಂದ ಕೆಲಸವನ್ನು ಮಾಡುತ್ತಿದ್ದಾರೆ. ನಮ್ಮ ಸಂಸ್ಥೆಯಲ್ಲಿ ಕಲಿತ ಹಲವಾರು ವಿದ್ಯಾರ್ಥಿಗಳು ಉನ್ನತ ಹುದ್ದೆಯಲ್ಲಿದ್ದಾರೆ. 40 ವರ್ಷ ಸುಧೀರ್ಘವಾಗಿ ಶಿಕ್ಷಣ ಸಂಸ್ಥೆಯನ್ನು ಕಟ್ಟಿ ನಡೆಸಲಾಗಿದೆ. ಎಲ್ಲಾ ವರ್ಗದವರಿಗೂ ಶಿಕ್ಷಣ ಸಿಗಬೇಕೆಂಬ ಉದ್ದೇಶದಿಂದ ಶಿಕ್ಷಣ ಸಂಸ್ಥೆಯನ್ನು ಸ್ಥಾಪಿಸಿದ್ದೇನೆ ಎಂದರು.

ದೇವರಾಜ್ ಅರಸ್ ಶಿಕ್ಷಣ ಸಂಸ್ಥೆ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ರಘುಚಂದನ್ ಮಾತನಾಡಿ, ನಮ್ಮ ಶಿಕ್ಷಣ ಸಂಸ್ಥೆಯ 40ನೇ ವರ್ಷದ ಅಂಗವಾಗಿ ಡಿ. 21 ರಿಂದ 24ರವರೆಗೆ ಡೆಸ್ಟಿನಿ–2023 ವಿವಿಧ ರೀತಿಯ ಕಾರ್ಯಕ್ರಮ ಆಯೋಜನೆ ಮಾಡಲಾಗಿದೆ. ಡಿ.21 ರ ಸಂಜೆ ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಕಾರ್ಯಕ್ರಮ ಉದ್ಘಾಟನೆ ಮಾಡಲಿದ್ದಾರೆ. ಚಿಕ್ಕಮಗಳೂರಿನ ಗೌರಿಗೆದ್ದೆಯ ಅವಧೂತ ಆಶ್ರಮದ ಶ್ರೀ ವಿನಯ ಗೂರೂಜಿ, ಜಿ.ಪಂ. ಸಿಇಓ ಸೋಮಶೇಖರ್, ದೇವರಾಜ್ ಅರಸ್ ಶಿಕ್ಷಣ ಸಂಸ್ಥೆಯ ಆಡಳಿತಾಧಿಕಾರಿ ಚಂದ್ರಕಲಾ, ಹೆಚ್ಚುವರಿ ಪೋಲಿಸ್ ವರಿಷ್ಠಾಧಿಕಾರಿ ಎಸ್.ಜೆ.ಕುಮಾರಸ್ವಾಮಿ, ಸಾರ್ವಜನಿಕ ಶಿಕ್ಷಣ ಇಲಾಖೆ ಉಪ ನಿರ್ದೇಶಕ ರವಿಶಂಕರ್ ರೆಡ್ಡಿ ಭಾಗವಹಿಸಲಿದ್ದಾರೆ ಎಂದು ತಿಳಿಸಿದರು. ಡಿ. 21 ರಂದು ಹಾಸ್ಯ ಕಲಾವಿದರಾದ ಸುಧಾ ಬರಗೂರು, ಮಿಮಿಕ್ರಿ ಗೋಪಿ, ಪ್ರಹ್ಲಾದ್ ಜೋಷಿ ಹಾಗೂ ರಾಘವೇಂದ್ರ ಆಚಾರ್ ಭಾಗವಹಿಸಲಿದ್ದಾರೆ. ಡಿ.22 ರಂದು ಸಂಜೆ 6.30ಕ್ಕೆ ಹೆಸರಾಂತ ಸಂಗೀತ ನಿರ್ದೇಶಕ ಅರ್ಜುನ್ ಜನ್ಯ ಅವರಿಂದ ಸಂಗೀತ ಕಾರ್ಯಕ್ರಮ, ಡಿ. 23ರಂದು ಚಂದನ್ ಶೆಟ್ಟಿಯವ ಅವರಿಂದ ಸಂಗೀತ ಕಾರ್ಯಕ್ರಮ, ಡಿ. 24 ರಂದು ಡಿಜೆ ನೈಟ್ ಎಂಬ ಕಾರ್ಯಕ್ರಮ ನಡೆಯಲಿದೆ.

# ಸಹಕಾರ ರಂಗವಿಲ್ಲದ ಕ್ಷೇತ್ರವಿಲ್ಲ; ಶ್ರೀನಿವಾಸ್

» ದಾವಣಗೆರೆ

ಆಡು ಮುಟ್ಟದ ಸೊಪ್ಪಿಲ್ಲ, ಸಹಕಾರ ರಂಗವಿಲ್ಲದ ಕ್ಷೇತ್ರವಿಲ್ಲ' ಎಂಬಂತೆ ಸಹಕಾರ ಕ್ಷೇತ್ರವು ಎಲ್ಲಾ ಕಡೆಯಲ್ಲಿಯು ವಿಸ್ತಾರಗೊಂಡಿದೆ ಎಂದು ಸಹಕಾರ ರತ್ನ ಪ್ರಶಸ್ತಿ ಪುರಸ್ಕೃತ ಆರ್.ಜಿ ಶ್ರೀನಿವಾಸಮೂರ್ತಿ ತಿಳಿಸಿದರು.

ಹೈಸ್ಕೂಲ್ ಮೈದಾನದಲ್ಲಿರುವ ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ(ಡಯೆಟ್)ಯ ಸಭಾಂಗಣದಲ್ಲಿ ದಾವಣಗೆರೆ ಜಿಲ್ಲಾ ಸಹಕಾರ ಒಕ್ಕೂಟ ನಿಯಮಿತ ವತಿಯಿಂದ ಜಿಲ್ಲೆಯ ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ಮತ್ತು ಪದವಿ ಪೂರ್ವ ವಿದ್ಯಾರ್ಥಿಗಳಿಗೆ ಆಯೋಜಿಸಲಾದ ಚರ್ಚಾ ಸ್ಪರ್ಧೆ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಪಂಡಿತ್ ಜವಹರಲಾಲ್ ನೆಹರುರವರು ಸಹಕಾರ ತತ್ವದಲ್ಲಿ ಅಚಲ ವಿಶ್ವಾಸವನ್ನೂ, ಬದ್ಧತೆಯನ್ನು ಇರಿಸಿಕೊಂಡಿದ್ದರು. ಸಹಕಾರ ತತ್ವದಿಂದ ಮಾತ್ರವೇ ರಾಷ್ಟ್ರದ ಅರ್ಥವ್ಯವಸ್ಥೆಗೆ ಹೊಸ ರೂಪ ನೀಡಲು ಸಾಧ್ಯ ಎಂದು ಭಾವಿಸಿದ್ದರು ಭಾರತದಲ್ಲಿ ಸಹಕಾರ ಆಂದೋಲನವು 1904 ರಲ್ಲಿ ಪ್ರಾರಂಭವಾಯಿತು. ಭಾರತದ ಸಹಕಾರ ಚಳುವಳಿಗೆ 120 ವರ್ಷಗಳ ಭವ್ಯ ಇತಿಹಾಸವಿದೆ. ಈ ಚಳುವಳಿಯು ಬೃಹತ್ತಾದದ್ದು ಮತ್ತು ಮಹತ್ತರವಾದದ್ದು. ದೇಶದಲ್ಲಿ ಮೊಟ್ಟಮೊದಲನೆಯ ಸಹಕಾರ ಸಂಘವು ಗದಗಿನ ಕಣಗಿನಹಾಳ್ ಗ್ರಾಮದಲ್ಲಿ ದಿ.ಎಸ್.ಎಸ್.ಪಾಟೀಲ್ ಇವರ ನೇತೃತ್ವದಲ್ಲಿ ಪ್ರಾರಂಭವಾಯಿತು. ದೇಶದ ಪ್ರತಿಷ್ಠಿತ ಸಹಕಾರ ಸಂಸ್ಥೆಗಳಾದ ಅಮುಲ್, ಇಫ್ಕೋ, ಕ್ರಿಭ್ಕೋ, ನಂದಿನಿ ಹೀಗೆಯೇ ಹಲವಾರು ಸಹಕಾರ ಸಂಘಗಳು ಉತ್ತಮ ಬೆಳವಣಿಗೆಯೊಂದಿಗೆ ದೇಶಕ್ಕೆ ಕೀರ್ತಿ ತಂದಿರುವುದು ನಾವೆಲ್ಲರೂ ಹೆಮ್ಮೆ ಪಡುವ ವಿಚಾರ ಎಂದರು.



ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆಯ ಪ್ರಾಂಶುಪಾಲರಾದ ಗೀತಾ.ಎಸ್ ರವರು ಮಾತನಾಡುತ್ತಾ ಭಾರತದಲ್ಲಿ ಸಹಕಾರ ಕ್ಷೇತ್ರವು ತುಂಬಾ ವ್ಯಾಪಕವಾಗಿ ಬೆಳೆದಿದೆ. ರೈತರ ಆರ್ಥಿಕ ಜೀವನ ಸುಧಾರಿಸಲು ಸಹಕಾರ ಕ್ಷೇತ್ರದ ಪಾತ್ರ ಅತ್ಯಂತ ಪ್ರಮುಖವಾದದ್ದು.ಹೈನುಗಾರಿಕೆ,ಕೃಷಿಮತ್ತು ತೋಟಗಾರಿಕೆಗಳಿಗೆ ಸಹಕಾರ ಕ್ಷೇತ್ರದಿಂದ ಸಾಲಸೌಲಭ್ಯ ದೊರಕುವುದರಿಂದ ರೈತರ ಬದುಕು ಹಸನಾಗಿದೆ ಎಂದು ತಿಳಿಸಿದರು.

ಜಿಲ್ಲಾ ಸಹಕಾರ ಒಕ್ಕೂಟ ಅಧ್ಯಕ್ಷರಾದ ಸಿರಿಗೆರೆ ರಾಜಣ್ಣ ಮಾತನಾಡಿ ರೈತರಿಗೆ ಬೇಕಾಗುವ ಬೀಜ, ಗೊಬ್ಬರ, ಕೃಷಿ ಉಪಕರಣಗಳು ಸಹಕಾರ ಸಂಘಗಳಿಂದ ದೊರೆಯುತ್ತಿವೆ ಬರಗಾಲ ಪರಿಸ್ಥಿತಿಯಲ್ಲೂ ಸಹ ರೈತರು ಆರ್ಥಿಕ ಸ್ಥಿರತೆ ಹೊಂದಿದ್ದಾರೆ ಎಂದರೆ ಅದು ಸಹಕಾರ ಕ್ಷೇತ್ರದಿಂದ ಮಾತ್ರ ಸಾಧ್ಯವಾಗಿದೆ. ಮುಂದಿನ ದಿನಗಳಲ್ಲಿ ಯುವಕರಿಗೆ ಸರ್ಕಾರಿ ಉದ್ಯೋಗಗಳು ಸಿಗುತ್ತವೆ ಎಂಬ ಭರವಸೆ ಇರುವುದಿಲ್ಲ. ಸಹಕಾರ ಕ್ಷೇತ್ರವು ಲಕ್ಷಾಂತರ ಜನರಿಗೆ ಉದ್ಯೋಗವಕಾಶವನ್ನು ಕಲ್ಪಿಸಿದೆ. ಆದ್ದರಿಂದ ಯುವಕರು ಸಹಕಾರ ಕ್ಷೇತ್ರದ ಬಗ್ಗೆ ಹೆಚ್ಚಿನ ಅರಿವು ಪಡೆದು ಅಭಿವೃದ್ಧಿ ಹೊಂದಬೇಕು ಎಂದು ತಿಳಿಸಿದರು.

ಜಿಲ್ಲಾ ಸಹಕಾರ ಒಕ್ಕೂಟ ನಿ. ಮುಖ್ಯಕಾರ್ಯನಿರ್ವಹಣಾಧಿಕಾರಿ ಮಂಗಳಗೌಡ ದಾನಪ್ಪಗೌಡ್ರ, ಎ.ವಿ. ಕಮಲಮ್ಮ ಮಹಿಳಾ ಪದವಿ ಕಾಲೇಜು ನಿವೃತ್ತ ಅರ್ಥಶಾಸ್ತ್ರ ವಿಭಾಗದ ಮುಖ್ಯಸ್ಥ ಡಾ. ಹೆಚ್.ಎಸ್. ಮಂಜುನಾಥ್, ಧಾರವಾಡ. ಕೃಷಿ ವ್ಯವಹಾರ ನಿರ್ವಹಣಾ ಶಾಸ್ತ್ರ, ಕೃಷಿ ವಿಶ್ವವಿದ್ಯಾಲಯ ನಿವೃತ್ತ ಪ್ರಾಧ್ಯಾಪಕರು, ಮತ್ತು ಮುಖ್ಯಸ್ಥ ಡಾ. ಬಸವರಾಜ ಬಣಕಾರ್ ಸಹಕಾರ ಸಂಘಗಳ ಜಿಲ್ಲಾ ಸಹಾಯಕ ನಿಬಂಧಕರಾದ ಎಂ. ದಕ್ಷಿಣಾಮೂರ್ತಿ, ಜಿಲ್ಲಾ ಸಹಕಾರ ಅಭಿವೃದ್ಧಿ ಅಧಿಕಾರಿ ಜಿ.ಎಸ್ ಸುರೇಂದ್ರ, ಸಹಕಾರ ಸಂಘಗಳ ಸಹಾಯಕರಾದ ಶ್ರೀಮತಿ ಎಸ್. ಮಂಜುಳ ಉಪಸ್ಥಿತರಿದ್ದರು

## ಫಾಸ್ಟ್ ನ್ಯೂಸ್

### ದೋಸೋತ್ಸವ; ಪೋಸ್ಟರ್ ಬಿಡುಗಡೆ



» ದಾವಣಗೆರೆ

ಡಿಸೆಂಬರ್ 23 ರಿಂದ 25 ರವರೆಗೆ ದಾವಣಗೆರೆ ನಗರದ ಎಂ.ಬಿ.ಎ ಮೈದಾನ ಮತ್ತು ಗಾಜಿನ ಮನೆ ಮುಂಭಾಗ ನಡೆಯಲಿರುವ ದೋಸೋತ್ಸವ ಪೋಸ್ಟರ್‌ನ್ನು ಗಣಿ ಮತ್ತು ಭೂ ವಿಜ್ಞಾನ, ತೋಟಗಾರಿಕೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್.ಎಸ್ ಮಲ್ಲಿಕಾರ್ಜುನ್ ರವರು ಗೃಹ ಕಚೇರಿಯಲ್ಲಿ ಪೋಸ್ಟರ್ ಬಿಡುಗಡೆಗೊಳಿಸಿದರು. ಜಿಲ್ಲಾಧಿಕಾರಿ ಡಾ. ವೆಂಕಟೇಶ್ ಎಂ.ವಿ, ಮಹಾನಗರ ಪಾಲಿಕೆ ಆಯುಕ್ತೆ ರೇಣುಕಾ, ದಾವಣಗೆರೆ ತಾಲ್ಲೂಕು ತಹಸಿಲ್ದಾರ್ ಡಾ. ಅಶ್ವತ್ ಎಂ.ಬಿ, ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯ ಉಪ ನಿರ್ದೇಶಕ ಶಿದ್ರಾಮ ಮಾರೀಹಾಳ್ ಹಾಗೂ ಇನ್ನಿತರ ಉಪಸ್ಥಿತರಿದ್ದರು.

### 25ರಂದು ಶಾರದ ದೇವಿ ಜಯಂತಿ

» ಚಳ್ಳಕೆರೆ

ನಗರದ ವಾಸವಿ ಕಾಲೋನಿಯಲ್ಲಿರುವ ಶಾರದಾಶ್ರಮದಲ್ಲಿ ಡಿ.25ರ ಸೋಮವಾರ ಬೆಳಗ್ಗೆ 10ಕ್ಕೆ ಶಾರದ ದೇವಿ ಜಯಂತಿ ಕಾರ್ಯಕ್ರಮ ಹಾಗೂ ಜೀವನಗಂಗಾ ಪರೀಕ್ಷೆಯಲ್ಲಿ ಉತ್ತೀರ್ಣರಾದವರಿಗೆ ಬಹುಮಾನ ವಿತರಣಾ ಕಾರ್ಯಕ್ರಮ ಇರಲಿದೆ ಎಂದು ಮಾತಾಜಿ ತ್ಯಾಗಮಯಿ ತಿಳಿಸಿದ್ದಾರೆ. ಈ ಬಗ್ಗೆ ಮಾಹಿತಿ ನೀಡಿದ ಅವರು, ಅಂದು ಬೆಳಗ್ಗೆ 10ಕ್ಕೆ ಶಾರದ ಆರ್ಚನೆಯೊಂದಿಗೆ ಕಾರ್ಯಕ್ರಮ ಆರಂಭವಾಗಿ ಶಾರದ ದೇವಿ ಹೋಮ, ಭಜನೆ, ಬಹುಮಾನ ವಿತರಣೆ ಆಶೀರ್ವಚನ ಹಾಗೂ ಪ್ರಸಾದ ವಿತರಣಾ ಕಾರ್ಯಕ್ರಮವಿರುತ್ತದೆ. ಹಿರಿಯೂರು ಶಾರದಾಶ್ರಮದ ಅಧ್ಯಕ್ಷರಾದ ಮಾತಾಜಿ ಚೈತನ್ಯಮಯಿ ಕಾರ್ಯಕ್ರಮವನ್ನು ಉದ್ಘಾಟಿಸಿ, ಆಶೀರ್ವಚನ ನೀಡುವರು.

### ಡಿ.21ರಂದು "ಸುಧಾರಿತ ಬೇಸಾಯ ಕ್ರಮಗಳು" ಕುರಿತು ತರಬೇತಿ

» ಚಿತ್ರದುರ್ಗ

ಹಿರಿಯೂರು ತಾಲ್ಲೂಕಿನ ಬಬ್ಬೂರು ಫಾರಂನ ಜಿಲ್ಲಾ ಕೃಷಿ ತರಬೇತಿ ಕೇಂದ್ರದಲ್ಲಿ ಇದೇ ಡಿಸೆಂಬರ್ 21ರಂದು ಬೆಳಿಗ್ಗೆ 10ಕ್ಕೆ ಜಿಲ್ಲೆಯ ರೈತರಿಗೆ "ಕಡಲೆ, ಹಿಂಗಾರಿ ಜೋಳ, ಸೂರ್ಯಕಾಂತಿ ಮತ್ತು ಕುಸುಬೆ ಬೆಳೆಯಲ್ಲಿ ಸುಧಾರಿತ ಬೇಸಾಯ ಕ್ರಮಗಳು" ಕುರಿತು ಒಂದು ದಿನದ ತರಬೇತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ತರಬೇತಿ ಕಾರ್ಯಕ್ರಮದಲ್ಲಿ ಕೃಷಿ ವಿಜ್ಞಾನ ಕೇಂದ್ರದ ಹಿರಿಯ ವಿಜ್ಞಾನಿ ಹಾಗೂ ಮುಖ್ಯಸ್ಥ ಡಾ. ಓ ಕುಮಾರ್ ತಮ್ಮ ಕೇಂದ್ರದ ಇತರೆ ವಿಷಯತಜ್ಞರೊಂದಿಗೆ ವಿಷಯ ಮಂಡನೆ ಮಾಡವರು. ಆಸಕ್ತ ರೈತರು ಭಾಗವಹಿಸಿ ತರಬೇತಿಯ ಸದುಪಯೋಗ ಪಡೆದುಕೊಳ್ಳಬೇಕು ಎಂದು ಬಬ್ಬೂರು ಫಾರಂ ಜಿಲ್ಲಾ ಕೃಷಿ ತರಬೇತಿ ಕೇಂದ್ರದ ಸಹಾಯಕ ಕೃಷಿ ನಿರ್ದೇಶಕ ಆರ್. ರಜನೀಕಾಂತ ಕೋರಿದ್ದಾರೆ.

### ತತ್ಸಮಾನ ವೃಂದದ ನಿರ್ದಿಷ್ಟಪಡಿಸಿದ ಹುದ್ದೆಗಳಿಗೆ ಅರ್ಜಿ ಆಹ್ವಾನ

» ದಾವಣಗೆರೆ

ಶಾಲಾ ಶಿಕ್ಷಣ ಇಲಾಖೆಯ ಸರ್ಕಾರಿ ಪ್ರಾಥಮಿಕ, ಪ್ರೌಢಶಾಲಾ ಸಹಶಿಕ್ಷಕರು ಮತ್ತು ಮುಖ್ಯಶಿಕ್ಷಕರು, ತತ್ಸಮಾನ ವೃಂದದ ನಿರ್ದಿಷ್ಟಪಡಿಸಿದ ಹುದ್ದೆಗಳಿಗೆ ಲಿಖಿತ ಪರೀಕ್ಷೆ ಮೂಲಕ ಭರ್ತಿ ಮಾಡಲು ಅರ್ಜಿ ಆಹ್ವಾನಿಸಲಾಗಿದೆ. ವಿಸ್ತೃತವಾದ ವೇಳಾಪಟ್ಟಿಯನ್ನು ಹಾಗೂ ಅರ್ಜಿ ಸಲ್ಲಿಸಲು ಮಾರ್ಗಸೂಚಿ ಅಂಶಗಳ ಸಹಿತವಾಗಿ ಈಗಾಗಲೇ ಇಲಾಖಾ ವೆಬ್‌ಸೈಟ್ **https://schooleducation.karnataka.gov.in** ನಲ್ಲಿ ಅಧಿಸೂಚನೆ ಹೊರಡಿಸಲಾಗಿದೆ. ಡಿ.30 ರೊಳಗಾಗಿ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದೆಂದು ಡಿಡಿಪಿಐ ಕೊಟ್ರೇಶ್.ಜಿ ತಿಳಿಸಿದ್ದಾರೆ.

### ತರಬೇತಿ ಕಾರ್ಯಾಗಾರ

» ಚಿತ್ರದುರ್ಗ

ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ, ಮಕ್ಕಳ ರಕ್ಷಣಾ ನಿರ್ದೇಶನಾಲಯ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಸಮಾಜ ಕಲ್ಯಾಣ ಇಲಾಖೆ, ಶಿಕ್ಷಣ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಜಿಲ್ಲಾ ಮಕ್ಕಳ ರಕ್ಷಣಾ ಘಟಕ ವತಿಯಿಂದ ಇದೇ ಡಿಸೆಂಬರ್ 20ರಂದು ಬೆಳಿಗ್ಗೆ 10 ಗಂಟೆಗೆ ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಕರ್ನಾಟಕ ರಾಜ್ಯ ಮಕ್ಕಳ ರಕ್ಷಣಾ ನೀತಿ-2016 ಕುರಿತು ಶೈಕ್ಷಣಿಕ ಅನುಷ್ಠಾನಾಧಿಕಾರಿಗಳಿಗೆ ಒಂದು ದಿನದ ತರಬೇತಿ ಕಾರ್ಯಾಗಾರ ಹಮ್ಮಿಕೊಳ್ಳಲಾಗಿದೆ.

ಜಿಲ್ಲಾಧಿಕಾರಿ ದಿವ್ಯಪ್ರಭು ಜಿಆರ್‌ಜೆ ಕಾರ್ಯಾಗಾರ ಉದ್ಘಾಟಿಸುವರು.

# ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣಕ್ಕೆ ಪಂಪಾಪತಿ ಹೆಸರಿಡಲು ಸಚಿವ, ಶಾಸಕರಿಗೆ ಮನವಿ

» ದಾವಣಗೆರೆ

ನಗರದಲ್ಲಿ ನೂತನವಾಗಿ ನಿರ್ಮಾಣವಾಗುತ್ತಿರುವ ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣಕ್ಕೆ ಶ್ರಮಜೀವಿ ಕಾಂ.ಪಂಪಾಪತಿ ನಿಲ್ದಾಣವೆಂದು ನಾಮಕರಣ ಮಾಡುವ ಮೂಲಕ ಅವರ ಕಂಚಿನ ಪ್ರತಿಮೆ ನಿರ್ಮಾಣ ಮಾಡಬೇಕೆಂದು ಒತ್ತಾಯಿಸಿ ಎಐಟಿಯುಸಿ ಜಿಲ್ಲಾ ಸಮಿತಿ ಜಿಲ್ಲಾ ಉಸ್ತುವಾರಿ ಸಚಿವರು ಹಾಗೂ ಶಾಸಕರಿಗೆ ಮನವಿ ನೀಡಿ ಆಗ್ರಹಿಸಿದರು.



ಸೋಮವಾರ ದಾವಣಗೆರೆ ಜಿಲ್ಲಾ ಉಸ್ತುವಾರಿ ಸಚಿವ ಎಸ್.ಎಸ್.ಮಲ್ಲಿಕಾರ್ಜುನ್ ಹಾಗೂ ಶಾಸಕ ಡಾ.ಶಾಮನೂರು ಶಿವಶಂಕರಪ್ಪ ಅವರ ನಿವಾಸಕ್ಕೆ ತೆರಳಿಗೆ ಎಐಟಿಯುಸಿ ನಿಯೋಗವು, ಪಂಪಾಪತಿ ಅವರು ತಮ್ಮ ಜೀವಿತಾವಧಿಯಲ್ಲಿ ಶ್ರಮಿಕರ ಅಳಲನ್ನು ನಿವಾರಣೆ ಮಾಡುತ್ತಾ ತಾವು ವಾಸ ಮಾಡಲಿಕ್ಕೆ ಸರಿಯಾದ ಸೂರನ್ನೂ ನಿರ್ಮಿಸಿಕೊಳ್ಳದೇ ಜೀವನ ನಡೆಸಿದ ಧೀಮಂತ ನಾಯಕ. ಅಲ್ಲದೇ ಕೆಎಸ್‌ಆರ್‌ಟಿಸಿ ಬಸ್‌ನಿಲ್ದಾಣಕ್ಕೆ ಕಾರಣರು. ಈ ನಿಟ್ಟಿನಲ್ಲಿ ನಗರದಲ್ಲಿ ನಿರ್ಮಾಣ ಆಗುತ್ತಿರುವ ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣಕ್ಕೆ ಅವರ ಹೆಸರನ್ನಿಟ್ಟು, ಕಂಚಿನ ಪ್ರತಿಮೆ ನಿರ್ಮಾಣ ಮಾಡಬೇಕೆಂದು ಆಗ್ರಹಿಸಿದರು.ಇದಲ್ಲದೇ ನಗರದಲ್ಲಿರುವ ಆಶ್ರಯ ನಿರಾಶ್ರಿತರನ್ನು ಗುರುತಿಸಿ ಸರ್ಕಾರ ಮತ್ತು ಜಿಲ್ಲಾಡಳಿತ ಅವರಿಗೆ ಹಕ್ಕುಪತ್ರ ನೀಡಿ, ಮೂಲಭೂತ ಸೌಲಭ್ಯಗಳೊಂದಿಗೆ ಮನೆಗಳನ್ನು ನಿರ್ಮಾಣ ಮಾಡಿಕೊಡಬೇಕು. ನಗರವು ದಿನದಿಂದ ದಿನಕ್ಕೆ ವೇಗವಾಗಿ ಬೆಳೆಯುತ್ತಿದ್ದು, ಜನಸಂಖ್ಯೆಗೆ ಅನುಗುಣವಾಗಿ ನಿರಾಶ್ರಿತರಿಗೆ ಮನೆಗಳ ನಿರ್ಮಾಣ ಮಾಡಬೇಕು ಎಂದರು. ದಾವಣಗೆರೆ ನಗರದ ಅವರಗೆರೆಯ ಗೋಮಾಳ ಸರ್ವೆ ನಂ.213 ಚಾಲ್ತಿ ಖಾತೆ ಸರ್ವೆ ನಂ.393ರಲ್ಲಿ ಸುಮಾರು 100 ಎಕರೆಗೂ ಅಧಿಕ ಜಮೀನು ಒತ್ತುವರಿಯಾಗಿದೆ. ದಾವಣಗೆರೆ ತಾಲ್ಲೂಕಿನ ತೋಳಹುಣಸೆ ಸರ್ವೆ ನಂ.62 ರಿಂದ 75ರವರೆಗೂ 133 ಎಕರೆ ಜಮೀನು ಇದ್ದು ಜನರು ವಾಸಮಾಡಲು ಯೋಗ್ಯ ಪ್ರದೇಶವಾಗಿದೆ. ಅಲ್ಲದೇ ದಾವಣಗೆರೆ ನಗರದಿಂದ 10-15 ಕಿ.ಮೀ.ವ್ಯಾಪ್ತಿಯಲ್ಲಿ 150 ರಿಂದ 200 ಎಕರೆ ಜಮೀನನ್ನು ರೈತರಿಂದ ನೇರವಾಗಿ ಖರೀದಿ ಮಾಡಬೇಕೆಂದು ಒತ್ತಾಯಿಸಿದರು.ದಾವಣಗೆರೆ ತಾಲ್ಲೂಕು ಹಾಲುವರ್ತಿ ಮತ್ತು ಕೊಡಗನೂರು ಗ್ರಾಮದ ಸುತ್ತಮುತ್ತಲಿನಲ್ಲಿರುವ ಸೇಂದಿ ವನಗಳು ಹಾಳು ಬಿದ್ದಿದ್ದು ಸಂಬಂಧಿಸಿದಂತೆ ಅಧಿಕಾರಿಗಳು ಸ್ಥಳ ಪರಿಶೀಲನೆ ಮಾಡಿ ಆಶ್ರಯ ನಿರಾಶ್ರಿತರನ್ನು ಗುರುತಿಸಿ ಮೂಲ ಸೌಕರ್ಯಗಳೊಂದಿಗೆ ಮನೆ ನಿರ್ಮಾಣ ಮಾಡಿಕೊಡಬೇಕೆಂದು ಆಗ್ರಹಿಸಿದರು. ಈಗಾಗಲೇ ಹಲವಾರು ಪಕ್ಷಗಳು, ಸಂಘ ಸಂಸ್ಥೆಗಳು ಈ ನಿರ್ಧಾರಕ್ಕೆ ಬೆಂಬಲ ಸೂಚಿಸಿದ್ದು, ಸಚಿವರು, ಶಾಸಕರು ಈ ಕುರಿತಂತೆ ಸರ್ಕಾರದ ಮಟ್ಟದಲ್ಲಿ ಚರ್ಚಿಸಿ, ಮಹಾನಗರ ಪಾಲಿಕೆಗೆ ಸೂಕ್ತ ನಿರ್ದೇಶನ ನೀಡುವ ಮೂಲಕ ಪಂಪಾಪತಿ ಅವರ ಹೆಸರನ್ನು ನಾಮಕರಣ ಮಾಡಬೇಕು. ಅಲ್ಲದೇ ಕಂಚಿನ ಪ್ರತಿಮೆ ನಿರ್ಮಾಣ ಮಾಡಬೇಕೆಂದು ಒತ್ತಾಯಿಸಿದರು.

ಈ ವೇಳೆ ಹೆಚ್.ಜಿ.ಉಮೇಶ್, ಆನಂದರಾಜ್, ರಾಘವೇಂದ್ರನಾಯರಿ,ವಿ.ಲಕ್ಷ್ಮಣ್,ಮುರುಗೇಶ್, ಆವರಗೆರೆ ಚಂದ್ರು, ವಾಸು, ಎಂ.ಬಿ.ಶಾರದಮ್ಮ, ಮಲ್ಲಮ್ಮ, ಐರಣಿ ಚಂದ್ರು, ಶಿವಕುಮಾರ್ ಡಿ.ಶೆಟ್ಟರ್, ಕನಗನಹಳ್ಳಿ ವೆಂಕಟೇಶ್, ತುಂಬಿಗೆರೆ ನಾಗಣ್ಣ, ಎ.ತಿಪ್ಪೇಶ್ ಆವರಗೆರೆ, ಹೆಚ್‌ಕೆಆರ್ ಸುರೇಶ್, ಮುದಹದಡಿ ಸುರೇಶ್, ನರೇಗಾ ರಂಗನಾಥ್, ಮೌನೇಶ್ ಇತರರು ಇದ್ದರು.

# ಯಾಕುಬ್ ಆಲಿಯವರಿಗೆ ಮಾನವ ರತ್ನ ರಾಜ್ಯ ಪ್ರಶಸ್ತಿ



» ಚಳ್ಳಕೆರೆ

ಮೈಸೂರು ಜಿಲ್ಲೆಯ ಮಾನವ ಹಕ್ಕುಗಳ ಸೇವಾ ಸಮಿತಿ ತನ್ನ ಏಳನೇ ವರ್ಷದ ವಾರ್ಷಿಕೋತ್ಸವ ಹಿನ್ನೆಲೆಯಲ್ಲಿ ವಿವಿಧ ಕ್ಷೇತ್ರದಲ್ಲಿ ಕಾರ್ಯನಿರ್ವಹಿಸಿದ ಸಮಾಜಸೇವಕರು, ಕಲಾವಿದರು, ವೈದ್ಯರು ಹಾಗೂ ಇತರೆ ಸಾಧಕರಿಗೆ ಮಾನವ ರತ್ನ ಪ್ರಶಸ್ತಿಯನ್ನು ನೀಡಿ ಗೌರವಿಸುತ್ತಾ ಬಂದಿದೆ. ಇತ್ತೀಚೆಗೆ ಮೈಸೂರಿನಲ್ಲಿ ಆಯೋಜಿಸಿದ್ದ ಏಳನೇ ವಾರ್ಷಿಕೋತ್ಸವ ಕಾರ್ಯಕ್ರಮದಲ್ಲಿ ಸಮಾಜ ಸೇವೆಗಾಗಿ ಚಳ್ಳಕೆರೆಯ ನಿವಾಸಿ ಸಿ.ಎಸ್.ಯಾಕುಬ್ ಆಲಿಯವರಿಗೆ ರಾಜ್ಯಮಟ್ಟದ ಮಾನವ ರತ್ನ ಪ್ರಶಸ್ತಿಯನ್ನು ಸಂಸ್ಥೆಯ ರಾಜ್ಯಾಧ್ಯಕ್ಷ ಡಾ.ಸೀತಾರಾಮಗೌಡ ನೀಡಿ, ಸನ್ಮಾನಿಸಿ ಅಭಿನಂದಿಸಿದರು. ಅಭಿನಂದನೆ :- ಮಾನವ ರತ್ನ ಪ್ರಶಸ್ತಿಯನ್ನು ಪಡೆದ ಸಿ.ಎಸ್.ಯಾಕುಬ್ ಆಲಿಯವರಿಗೆ ಯುವ ಮುಖಂಡ ಕೆ.ಟಿ.ಕುಮಾರಸ್ವಾಮಿ, ಡಿ.ಟಿ.ಸುರೇಶ್, ಮಹಮ್ಮದ್‌ವಲಿವುಲ್ಲಾ, ಜೆ.ಮಂಜುನಾಥ, ಬಿ.ಫರೀದ್‌ಖಾನ್, ಬಿ.ಎಸ್.ಶಿವಪುತ್ರಪ್ಪ ಮುಂತಾದವರು ಅಭಿನಂದನೆ ಸಲ್ಲಿಸಿದ್ದಾರೆ.

# ಟಾಟಾಏಸ್‌ನಲ್ಲಿ ಸಿಂಧಿಹಸು ಕಳ್ಳತನ: ಚೇಸ್ ಮಾಡಿ ಹಸು ರಕ್ಷಿಸಿದ ಮಾಲೀಕ

ಚಳ್ಳಕೆರೆ: ತಾಲ್ಲೂಕಿನ ಕಸಬಾ ಹೋಬಳಿಯ ನಂದಾಪುರ ಗ್ರಾಮದಲ್ಲಿ ಮನೆಯ ಮುಂದೆ ಕಟ್ಟಿಹಾಕಿದ್ದ ಸಿಂಧಿಹಸುವನ್ನು ಟಾಟಾಏಸ್ ವಾಹನದಲ್ಲಿ ಕಳ್ಳತನ ಮಾಡಿಕೊಂಡು ವಾಹನದಲ್ಲಿ ಸಾಗಾಟ ಮಾಡುವ ಸಂದರ್ಭದಲ್ಲಿ ಅನುಮಾನಗೊಂಡ ರೈತ ನಾಗರಾಜಪ್ಪ ಮತ್ತು ಅವರ ಪುತ್ರ ಲೋಕೇಶ್ ಕಾರಿನಲ್ಲಿ ಟಾಟಾಏಸ್ ವಾಹನವನ್ನು ಸಿನಿಮಿಯ ರೀತಿಯಲ್ಲಿ ಚೇಜ್ ಮಾಡಿ ವಾಹನವವನ್ನು ಸಿಂಧಿಹಸುಸಹಿತ ತಪ್ಪೆಹಚ್ಚಿ ವಾಹನ ಚಾಲಕ ಮತ್ತು ಮತ್ತೊರ್ವ ವ್ಯಕ್ತಿ ವಾಹನವನ್ನು ಬಿಟ್ಟು ಪರಾರಿಯಾಗಿದ್ದಾರೆ. ಪಿಎಸ್‌ಐ ಸತೀಶ್‌ನಾಯಕ ಪ್ರಕರಣ ದಾಖಲಿಸಿದ್ದು, ನಾಗರಾಜುಯವರಿಗೆ ಸೇರಿದ ಸುಮಾರು 50 ಸಾವಿರ ಮೌಲ್ಯದ ಹಸುವನ್ನು ಟಾಟಾಏಸ್ ವಾಹನದಲ್ಲಿ ಕಳ್ಳತನ ಮಾಡಿಕೊಂಡು ಹೋಗುವ ಸಂದರ್ಭದಲ್ಲಿ ಅವರನ್ನು ಬೆನ್ನತ್ತಿ ವಾಹನವನ್ನು ಮಾತ್ರ ಹಿಡಿಯಲಾಗಿದೆ. ಆದರೆ, ಕಳ್ಳರು ನಾಪತ್ತೆಯಾಗಿದ್ದು ಅವರ ಪತ್ತೆ ಮಾಡುವ ಕಾರ್ಯ ಮುಂದುವರೆದಿದೆ ಎಂದರು.






**ಚಳ್ಳಕೆರೆ ನಗರದ ಎಸ್‌ಆರ್‌ಎಸ್ ಹೆರಿಟೇಜ್ ಶಾಲೆಗೆ ಕೆ-2 ಸ್ಕೂಲ್ ಎಕ್ಸಲೆನ್ಸ್ ಅವಾರ್ಡ್-23 ಸ್ವೀಕರಿಸಿದ ಪ್ರಾಂಶುಪಾಲ ಬಿ.ಎಸ್.ವಿಜಯ್.**

## ಪ್ರಮುಖ ಸುದ್ದಿ

# ಸರ್ಕಾರ ಉಪ್ಪಾರ ಸಮಾಜದ ಅಭಿವೃದ್ಧಿಗೆ ಸ್ಪಂದಿಸಬೇಕು

» ಹೊಸದುರ್ಗ

ದೇಶದಾದ್ಯಂತ 15 ಕೋಟಿ ಹೆಚ್ಚು ಜನಸಂಖ್ಯೆ ಹೊಂದಿರುವ ಉಪ್ಪಾರ ಸಮಾಜ ಶಿಕ್ಷಣ ಉದ್ಯೋಗ ಮೂಲಭೂತ ಸೌಕರ್ಯಗಳಿಂದ ವಂಚಿತವಾಗಿದ್ದು ಈ ಸಮಾಜದ ಅಭಿವೃದ್ಧಿಗೆ ಸರ್ಕಾರಗಳು ಸ್ಪಂದಿಸಬೇಕು' ಎಂದು ಹೊಸದುರ್ಗದ ಭಗೀರಥ ಪೀಠದ ಪೀಠಾಧಿಪತಿ ಪುರುಷೋತ್ತಮಾನಂದ ಪುರಿ ಸ್ವಾಮೀಜಿ ಆಗ್ರಹಿಸಿದರು.

ಅವರು ಪಟ್ಟಣದ ವೀರಭದ್ರೇಶ್ವರ ದೇವಸ್ಥಾನದ ಮುಂಭಾಗದಲ್ಲಿ ಭಗೀರಥ ಜ್ಯೋತಿ ಕಲ್ಯಾಣ ರಥ ಯಾತ್ರೆ ಸ್ವಾಗತಿಸಿ ಮೆರವಣಿಗೆಗೆ ಚಾಲನೆ ನೀಡಿ ಮಾತನಾಡಿ ದೆಹಲಿಯ ರಾಮಲೀಲಾ ಮೈದಾನದಲ್ಲಿ ಬೃಹತ್ ಉಪ್ಪಾರರ 'ಸಮಾವೇಶ ಮಾಡುವ ಮೂಲಕ ದೇಶದಾದ್ಯಂತ ವಿವಿಧ ಹೆಸರುಗಳಲ್ಲಿ ಕರೆಯಲ್ಪಡುವ ಉಪ್ಪಾರರನ್ನು ಒಂದೇ ವೇದಿಕೆಗೆ ತರಲಾಗುವುದು



ಈ ಸಮಾವೇಶದ ಪೂರ್ವಭಾವಿಯಾಗಿ ಜನಜಾಗೃತಿ ಸಮಾವೇಶ ಮಾಡುತ್ತಿದ್ದೇವೆ. ಸಮಾಜದ ಮಕ್ಕಳಿಗೆ ಶಿಕ್ಷಣ, ಉದ್ಯೋಗ ಹಾಗೂ ರಾಜಕೀಯದಲ್ಲಿ ಸಮುದಾಯದ ಮಕ್ಕಳಿಗೆ ಸ್ಥಾನ ದೊರೆಯಬೇಕೆಂಬುದು ನಮ್ಮ ಉದ್ದೇಶ. ಹಿಮಾಲಯದ ಗಂಗೋತ್ರಿಯಿಂದ, ಹೃಷಿಕೇಷದಿಂದ ಹರಿದ್ವಾರ ಆರಂಭವಾಗಿರುವ ಭಗೀರಥ ಭಾರತ ಜನಕಲ್ಯಾಣ ಯಾತ್ರೆಯು ಉತ್ತರ ಪ್ರದೇಶ, ಬಿಹಾರ್, ನವದೆಹಲಿ ಪಂಜಾಬ್, ಹರಿಯಾಣ, ಗುಜರಾತ್, ರಾಜಸ್ಥಾನ, ಮಹಾರಾಷ್ಟ್ರಗಳಲ್ಲಿ ಸಂಚರಿಸಿ, ಡಿಸೆಂಬರ್ 9ರಂದು ರಾಜ್ಯ ಪ್ರವೇಶಿಸಿದೆ. ರಾಜ್ಯದ ವಿವಿಧಡೆ ಸಂಚರಿಸಿ ಹೊಸದುರ್ಗ ಪ್ರವೇಶಿಸಿದೆ' ಎಂದರು.'ಭಗೀರಥ ಜನಾಂಗವು ವಿವಿಧ ರಾಜ್ಯಗಳಲ್ಲಿ ಒಂದೊಂದು ಹೆಸರಿನಿಂದ ಕರೆಯುತ್ತಿದ್ದು, ದೇಶದಲ್ಲಿ 15 ಕೋಟಿಗೂ ಹೆಚ್ಚು ಸಮುದಾಯದವರು ಇದ್ದು, ರಾಜ್ಯದಲ್ಲಿ 40 ಲಕ್ಷಕ್ಕೂ ಹೆಚ್ಚು ಜನಸಂಖ್ಯೆ ಇದೆ. ರಥಯಾತ್ರೆ ರಾಷ್ಟ್ರದ ಎಲ್ಲಾ ರಾಜ್ಯಗಳಲ್ಲಿ ಸಂಚರಿಸಿ 2024ರ ಫೆ.28 ಹಾಗೂ 29ರಂದು ನವದೆಹಲಿಯ ರಾಮಲೀಲಾ ಮೈದಾನದಲ್ಲಿ ಬೃಹತ್ ಸಮಾವೇಶ ನಡೆಯಲಿದೆ' ಎಂದು ಹೇಳಿದರು.

'ಮೀಸಲಾತಿ ಇಲ್ಲದ ರಾಜ್ಯಗಳಲ್ಲಿ ಮೀಸಲಾತಿ ಜಾರಿಗೊಳಿಸಬೇಕು. ಗಂಗಾನದಿ ತಟದಲ್ಲಿ ಹೃಷಿಕೇಷ, ಹರಿದ್ವಾರ ಭಾಗಗಳಲ್ಲಿ ಭಗೀರಥ ಮೂರ್ತಿಯ ಸ್ಥಾಪನೆ ಮಾಡುವಂತೆ ಒತ್ತಾಯ ಮಾಡಲಾಗುವುದು. ಎಲ್ಲಾ ರಾಜ್ಯಗಳಲ್ಲೂ ಭಗೀರಥ ಜಯಂತಿ ಆಚರಿಸಬೇಕು. ರಾಷ್ಟ್ರಮಟ್ಟದಲ್ಲೂ ಉಪ್ಪಾರ ಅಭಿವೃದ್ಧಿ ನಿಗಮ ಸ್ಥಾಪಿಸಿ □2000 ಕೋಟಿ ಮೀಸಲಿಡುವಂತೆ ಸಮಾವೇಶದಲ್ಲಿ ಒತ್ತಾಯಿಸಲಾಗುವುದು' ಎಂದು ಮಾಹಿತಿ ನೀಡಿದರು.'ಭಗೀರಥ ಸಮಾಜದವರಿಗೆ □2ಲಕ್ಷದವರೆಗೆ ಇರುವ ಆದಾಯಮಿತಿಯನ್ನು ಸಡಿಲಗೊಳಿಸಬೇಕು. ಇದರಿಂದಾಗಿ ವೈದ್ಯಕೀಯ, ಎಂಜಿನಿಯರ್ ಸೀಟು ಪಡೆಯಲು ಅನುಕೂಲವಾಗುತ್ತದೆ. ಅಲ್ಲದೇ ಉಪ್ಪಾರ ಅಭಿವೃದ್ಧಿ ನಿಗಮಕ್ಕೆ ಹೆಚ್ಚಿನ ಅನುದಾನ ನೀಡಬೇಕು' ಎಂದು ಆಗ್ರಹಿಸಿದರು. ಶಾಸಕ ಬಿ.ಜಿ.ಗೋವಿಂದಪ್ಪ ಮಾತನಾಡಿ ಉಪ್ಪಾರ ಸಮಾಜದ ಅಭಿವೃದ್ಧಿಗೆ ಸಂಬಂಧಿಸಿದಂತೆ ರಾಜ್ಯಸರ್ಕಾರ ಬದ್ಧವಾಗಿದೆ ಎಂದರು.

ಹೈಕೋರ್ಟಿನನಿವೃತ್ತನ್ಯಾಯಾಧೀಶರಾದ ಬಿಲ್ಲಪ್ಪ, ಕೆಪಿಸಿಸಿ ಸದಸ್ಯ ಎಂ.ಪಿ.ಶಂಕರ್, ತಾಲೂಕು ಅಧ್ಯಕ್ಷ ಪಿ.ಕೆ.ಪರಪ್ಪ, ಜಿ.ಪಂ ಮಾಜಿ ಅಧ್ಯಕ್ಷೆ ವಿಶಾಲಾಕ್ಷಿ ನಟರಾಜ್, ಗೌರಿಬಿದನೂರು ನಾಗರಾಜ್, ಜಿಲ್ಲಾಅಧ್ಯಕ್ಷರಾದ ಎನ್.ವಿರೇಶ್, ಗೌರವಾಧ್ಯಕ್ಷರಾದ ಎಸ್.ನಾಗರಾಜ್ ಎಲ್.ಮಹೇಶ್, ಮಾಜಿ ಅಧ್ಯಕ್ಷರಾದ ಆರ್, ಮೂರ್ತಿ ಭಾಗವಹಿಸಿದ್ದರು.

## ಫಾಸ್ಟ್ ನ್ಯೂಸ್

### ಶ್ರೀ ರಾಮನ ವಂಶದ ಭಗಿರಥ ಶ್ರೀಗಳಿಗೆ ರಾಮಮಂದಿರ ಉದ್ಘಾಟನೆಗೆ ಆಹ್ವಾನ

» **ಹೊಸದುರ್ಗ**

ಭಾರತದ ಪವಿತ್ರ ಪುಣ್ಯಭೂಮಿ ಅಯೋಧ್ಯೆಯಲ್ಲಿ ಜನವರಿ 22 ರಂದು ನಡೆಯಲಿರುವ ಶ್ರೀ ರಾಮಮಂದಿರ ಲೋಕಾರ್ಪಣೆ ಸಮಾರಂಭಕ್ಕೆ ಇಶ್ವಾಕು ವಂಶದ ಪ್ರಭು ಶ್ರೀ ರಾಮ, ದಿಲೀಪ ಹಂಸರತ ಭಗೀರಥ ಇವರ ವಂಶ ಪಾರಂಪರ್ಯದ ಬ್ರಹ್ಮ ವಿದ್ಯಾ ನಗರದ ಭಗೀರಥ ಗುರುಪೀಠದ ಪುರುಷೋತ್ತಮಾನಂದ ಪುರಿ ಸ್ವಾಮೀಜಿ ಅವರಿಗೆ ಶ್ರೀ ರಾಮ ಜನ್ಮಭೂಮಿ ತೀರ್ಥಕ್ಷೇತ್ರ ಆಡಳಿತ ಮಂಡಳಿ ಪ್ರಧಾನ ಕಾರ್ಯದರ್ಶಿ ಚಂಪತ್ ರಾಜ್ ಆಹ್ವಾನ ಪತ್ರಿಕೆ ಕಳುಹಿಸಿದ್ದಾರೆ. 'ಇದೊಂದು ಅವಿಸ್ಮರಣೀಯ ಸಮಾರಂಭವಾಗಿದ್ದು ಜಗತ್ತಿನಾದ್ಯಂತ ಅನೇಕ ಪ್ರಮುಖರು, ಭಕ್ತರು, ರಾಮಮಂದಿರ ಉದ್ಘಾಟನೆ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ. ತಾವೂ ಸಹ ಈ ಸಮಾರಂಭದಲ್ಲಿ ಭಾಗವಹಿಸಬೇಕೆಂದು ಪತ್ರದಲ್ಲಿ ತಿಳಿಸಲಾಗಿದೆ'.



ನೂರಾರು ವರ್ಷಗಳ ಸುದೀರ್ಘ ಹೋರಾಟ, ಸಾವಿರಾರು ದೇಶ ಪ್ರೇಮಿ ಹಾಗೂ ಧರ್ಮ ರಕ್ಷಕರುಗಳ ಪ್ರಯತ್ನದಿಂದಾಗಿ ಇಂದು ರಾಮ ಮಂದಿರ ನಿರ್ಮಾಣವಾಗಿದೆ. ಸರ್ವೋಚ್ಚ ನ್ಯಾಯಾಲಯದ ತೀರ್ಪಿನ ನಂತರ ರಾಮ ಮಂದಿರ ನಿರ್ಮಾಣಕ್ಕೆ ಪ್ರಧಾನ ಮಂತ್ರಿಗಳು ಶಿಲಾನ್ಯಾಸ ನೇರವೇರಿಸಿದ ಕೆಲವೇ ವರ್ಷಗಳಲ್ಲಿ ನೂರಾರು ಕೋಟಿ ಹಿಂದೂ ಭಕ್ತರ ಕನಸು ನನಸಾಗುವ ಸುಯೋಗ ದೊರೆತಿದೆ. ಈ ಪುಣ್ಯಕ್ಷಣಕ್ಕಾಗಿ ಕಾತುರದಿಂದ ಕಾಯುತ್ತಿದ್ದೇವೆ. ನಮಗೆ ಆಹ್ವಾನ ಬಂದಿರೋದು ಸಂತೋಷವನ್ನುಂಟು ಮಾಡಿದೆ.

» **ಪುರುಷೋತ್ತಮಾನಂದ ಪುರಿ ಸ್ವಾಮೀಜಿ**
**ಭಗೀರಥ ಪೀಠ, ಬ್ರಹ್ಮವಿದ್ಯಾನಗರ, ಹೊಸದುರ್ಗ**

### ರೈಲಿನ ಪ್ರಯಾಣಿಕದಿಂದ ಆರ್ಥಿಕ ಮಿತವ್ಯಯ: ಸಾಯಿವಣ್ಣ



» **ಚಳ್ಳಕೆರೆ**

ತಾಲ್ಲೂಕಿನ ಬಾಲೇನಹಳ್ಳಿ ರೈಲ್ವೆ ಸ್ಟೇಷನ್‌ಗೆ ಶಾಲಾ ವಿದ್ಯಾರ್ಥಿಗಳು ಶಿಕ್ಷಕರೊಂದಿಗೆ ಭೇಟಿ ನೀಡಿ ರೈಲ್ವೆ ಇಲಾಖೆಯ ಕಾರ್ಯಗಳ ಬಗ್ಗೆ ಮಾಹಿತಿ ಪಡೆದರು.ರೈಲ್ವೆ ನಿಲ್ದಾಣದ ವ್ಯವಸ್ಥಾಪಕ ಸಾಯಿವಣ್ಣ ಮಾಹಿತಿ ನೀಡಿ, ರೈಲು ಹತ್ತಲು ಬರುವ ಪ್ರಯಾಣಿಕರಿಗೆ ಇಲ್ಲಿಗೆ ಆಗಮಿಸುವ ರೈಲು, ಅದು ಚಲಿಸುವ ಮಾರ್ಗ, ಅವರು ಹೋಗಬೇಕಾದ ಸ್ಥಳದ ಬಗ್ಗೆ ಮಾಹಿತಿ ಪಡೆದು ಅವರಿಗೆ ಟಿಕೆಟ್ ನೀಡಲಾಗುತ್ತದೆ. ಪ್ರಯಾಣಿಕರಿಗೆ ತೊಂದರೆಯಾಗದಂತೆ ಕುಡಿಯುವ ಶುದ್ಧ ನೀರು, ವಿದ್ಯುತ್ ಬೆಳಕು ಹಾಗೂ ಶೌಚಾಲಯದ ವ್ಯವಸ್ಥೆ ಮಾಡಲಾಗಿದೆ. ರೈಲ್ವೆ ನಿಲ್ದಾಣಕ್ಕೆ ಬರುವ ಪ್ರಯಾಣಿಕರು ನಿಲ್ದಾಣದಲ್ಲಿ ಹಾಕಿರುವ ಆಸನಗಳಲ್ಲಿ ರೈಲು ಬರುವ ತನಕ ಕಾಯಬೇಕು. ರೈಲು ಬರಲು ಐದು ನಿಮಿಷ ಮೊದಲೇ ಪ್ರಯಾಣಿಕರಿಗೆ ಗಂಟೆ ಬಾರಿಸುವ ಮೂಲಕ ಮಾಹಿತಿ ನೀಡಲಾಗುತ್ತದೆ. ರೈಲು ಪ್ರಯಾಣ ಅತ್ಯಂತ ಸುರಕ್ಷಿತವಾಗಿದ್ದು, ಆರ್ಥಿಕವಾಗಿಯೂ ಸಹ ಪ್ರಯಾಣಿಕರಿಗೆ ಲಾಭವಾಗುತ್ತದೆ ಎಂದು ಮಾಹಿತಿ ನೀಡಿದರು.ಮುಖ್ಯ ಶಿಕ್ಷಕ ಓ.ಚಿತ್ತಯ್ಯ ಎಲ್ಲಾ ವಿದ್ಯಾರ್ಥಿಗಳಿಗೆ ರೈಲ್ವೆ ನಿಲ್ದಾಣದ ಅಧ್ಯಯನದ ಬಗ್ಗೆ ನಿಮಗೆ ಮಾಹಿತಿ ನೀಡಲಾಗಿದೆ. ರೈಲ್ವೆಯ ಸ್ಟೇಷನ್ ಮಾಸ್ಟರ್ ನಿಮಗೆ ರೈಲಿನ ಚಲನವಲನ ಹಾಗೂ ಪ್ರಯಾಣಿಕರಿಗೆ ಆಗುವ ಅನುಕೂಲತೆಗಳ ಬಗ್ಗೆ ಮಾಹಿತಿ ನೀಡಿದ್ದಾರೆ. ಪ್ರಸ್ತುತ ರಾಜ್ಯದಲ್ಲಿ ಪ್ರತಿನಿತ್ಯ ಕೋಟ್ಯಾಂತರ ಜನರು ರೈಲಿನಲ್ಲೇ ಪ್ರಯಾಣ ನಡೆಸುತ್ತಾರೆಂದರು. ಶಿಕ್ಷಕ ಎಸ್.ಟಿ.ಮಂಜುನಾಥ, ವಿ.ಶರಣಪ್ಪ, ಮೇಘನಾ, ಭವಾನಿ, ವಿದ್ಯಾರ್ಥಿಗಳಾದ ತ್ರಿವೇಣಿ, ವಿನಯ್, ಕಿರಣ್, ಆಕಾಶ, ಜೀವನ್, ಸುಚಿತ್ರಾ, ಅಕ್ಷಿತಾ, ಗೌತಮಿ, ಸ್ಫೂರ್ತಿ ಮುಂತಾದವರು ಉಪಸ್ಥಿತರಿದ್ದರು.

### ನಗರಸಭೆ: ಇಂದಿನಿಂದ ಹೊರಗುತ್ತಿಗೆದಾರರಿಂದ ಅನಿರ್ದಿಷ್ಟಾವಧಿ ಮುಷ್ಕರ

» **ಚಳ್ಳಕೆರೆ**

ಇಲ್ಲಿನ ನಗರಸಭೆಯ ಹೊರಗುತ್ತಿಗೆದಾರರ ಸಂಘ ಕ್ಲಿನರ್, ವಾಹನ ಚಾಲಕರು, ಲೋಡರ್ಸ್‌ರವರನ್ನು ಪೌರಕಾರ್ಮಿಕ ರೀತಿಯಲ್ಲಿ ನೇರಪಾವತಿ ವ್ಯಾಪ್ತಿಗೆ ಒಳಪಡಿಸಬೇಕೆಂದು ಒತ್ತಾಯಿಸಿ ಡಿ.20ರಿಂದ ಅನಿರ್ದಿಷ್ಟಾವಧಿ ಮುಷ್ಕರವನ್ನು ಕೈಗೊಳ್ಳಲಿದ್ದಾರೆಂದು ಸಂಘದ ಉಪಾಧ್ಯಕ್ಷ ವೆನ್ನೇಶ್ ತಿಳಿಸಿದ್ದಾರೆ.

# ತ್ರಿವಿಧ ದಾಸೋಹದಲ್ಲಿ ಆರೋಗ್ಯ ಸೇವೆ ಆದರ್ಶ

» **ಹರಿಹರ**

ಅಕ್ಷರ ದಾಸೋಹ ಮತ್ತು ಅನ್ನ ದಾಸೋಹದಲ್ಲಿ ನಿರತರಾಗಿರುವ ಶ್ರೀ ವೇಮನಾನಂದ ಶ್ರೀಗಳ ಮಠ ಮತ್ತು ವಿದ್ಯಾಸಂಸ್ಥೆಯಲ್ಲಿ ಪ್ರೀತಿ ಆರೈಕೆ ಟ್ರಸ್ಟ್ ವತಿಯಿಂದ ಉಚಿತವಾಗಿ ಆರೋಗ್ಯ ತಪಾಸಣೆ ಶಿಬಿರ ಏರ್ಪಡಿಸಿರುವ ಡಾ.ಟಿ.ಜಿ.ರವಿಕುಮಾರ್ ಅವರ ಕಾರ್ಯ ಆದರ್ಶವಾದುದು ಎಂದು ಗಾಣಿಗ ಗುರುಪೀಠದ ಪೀಠಾಧ್ಯಕ್ಷರಾದ ಶ್ರೀ ಬಸವ ಕುಮಾರ ಸ್ವಾಮೀಜಿ ಹೇಳಿದರು.

ಶ್ರೀ ಮಹಾಯೋಗಿ ವೇಮನ ಸಂಸ್ಥಾನ ಮಹಾಮಠದ ಪೀಠಾಧ್ಯಕ್ಷರಾದ ಶ್ರೀ ವೇಮನಾನಂದ ಸ್ವಾಮೀಜಿಯವರ ಜನ್ಮದಿನದ ಪ್ರಯುಕ್ತ ಪ್ರೀತಿ ಆರೈಕೆ ಟ್ರಸ್ಟ್ ಸಹಯೋಗದಲ್ಲಿ ನಡೆದ ಆರೋಗ್ಯ ಉಚಿತ ತಪಾಸಣೆ ಮತ್ತು ರಕ್ತದಾನ ಶಿಬಿರದಲ್ಲಿ ಮಾತನಾಡಿದರು.

ವೇಮನಾನಂದ ಶ್ರೀಗಳು ಯಾವುದೇ ಅನುದಾನಗಳ ವ್ಯಾಮೋಹ, ಪ್ರಚಾರದ ಹಪಾಹಪಿ, ಆಡಂಬರ, ಅಬ್ಬರವಿಲ್ಲದೆಯೇ ಸಮಾಜ ಸೇವೆಯಲ್ಲಿ ತೊಡಗಿದ್ದಾರೆ. ಅವರ ಜನ್ಮದಿನದಂದು ಕೂಡ ಸಭಾ ಕಾರ್ಯಕ್ರಮಕ್ಕೆ ಬರದೇ ತಮ್ಮದು ಭಕ್ತಿಸೇವೆಗೆ ಮೀಸಲಾದ ಬದುಕು ಎಂಬುದನ್ನು ಮತ್ತೊಮ್ಮೆ ಸಾಬೀತು ಪಡಿಸಿ, ನಮ್ಮೆಲ್ಲರಿಗೂ ಪ್ರೇರಣೆಯಾಗಿದ್ದಾರೆ ಎಂದು ಹೇಳಿದರು.



ಜಗಳೂರು ಮಾಜಿ ಶಾಸಕ ಟಿ. ಗುರುಸಿದ್ದನಗೌಡ ಮಾತನಾಡಿ, ಯೋಗಿ ವೇಮನರು ಷಟ್ಪದಿಗಳ ಮೂಲಕ ಬದುಕಿನ ಅರ್ಥವನ್ನು ಅತ್ಯಂತ ಸರಳವಾಗಿ ಅರ್ಥೈಸಿದ್ದಾರೆ. ವ್ಯಾವಹಾರಿಕ ಬದುಕನಲ್ಲಿ ನೀತಿ. ನಿಯಮಗಳನ್ನೇ ಎಲ್ಲರೂ ಮರೆತು ಬದುಕುತ್ತಿದ್ದೇವೆ. ಈ ಮೂಲಕ ಸಂಬಂಧಗಳ ಮಹತ್ವವನ್ನೇ ಮರೆತಿದ್ದೇವೆ. ಇಂದಿನ ಕಾಲಘಟ್ಟದಲ್ಲಿ ಶ್ರೀ ವೇಮನರ ಷಟ್ಪದಿಗಳನ್ನು ಜೀವನಕ್ಕೆ ಅಳವಡಿಸಿಕೊಂಡರೆ ನಮ್ಮ ಬದುಕು ಸನ್ಮಾರ್ಗದಲ್ಲಿ ಸಾಗಲಿದೆ ಎಂದು ಹೇಳಿದರು.

ಆರೈಕೆ ಆಸ್ಪತ್ರೆ ಮುಖ್ಯಸ್ಥ ಡಾ.ಟಿ.ಜಿ.ರವಿಕುಮಾರ್ ಮಾತನಾಡಿ, ಬಸವಾದಿ ಶರಣರ ಪ್ರೇರಣೆ ಪಡೆದು, ಪ್ರೀತಿ ಆರೈಕೆ ಟ್ರಸ್ಟ್ ಮೂಲಕ ಆರೋಗ್ಯ ಉಚಿತ ಶಿಬಿರಗಳನ್ನು ನಿರಂತರವಾಗಿ ಏರ್ಪಡಿಸುತ್ತಿದ್ದೇವೆ. ಯೋಗಿ ವೇಮನರ ಶ್ರೀಮಠದಲ್ಲಿ ಆರೋಗ್ಯ ದಾಸೋಹ ನೀಡುತ್ತಿರುವುದು ಅತ್ಯಂತ ಸಾರ್ಥಕಭಾವ ಮೂಡಿಸಿದೆ ಎಂದು ಹೇಳಿದರು.

ಗ್ರಾಮೀಣ ಭಾಗದಲ್ಲಿ ಆರೋಗ್ಯ ಜಾಗೃತಿ ಮೂಡಿಸುವ ಏಕೈಕ ಉದ್ದೇಶದಿಂದ ಪ್ರೀತಿ ಆರೈಕೆ ಟ್ರಸ್ಟ್ ಆರಂಭ ಮಾಡಲಾಗಿದೆ. ಸದೃಢ ಮನಸ್ಸು ಮತ್ತು ಉತ್ತಮ ದೇಹಾರೋಗ್ಯ ಇದ್ದಾಗ ಮಾತ್ರ ನಮ್ಮ ಬದುಕು ಹಸನಾಗಿರಲಿದೆ. ಇದು ವೈಯುಕ್ತಿಕ ಪ್ರಗತಿಯ ಜತೆಗೆ ಸಾಮಾಜಿಕ ಪ್ರಗತಿಯನ್ನೂ ಹೆಚ್ಚಿಸಲಿದೆ, ಈ ಮೂಲಕ ದೇಶದ ಪ್ರಗತಿ ಆಗಲಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಸಿಜಿ ಆಸ್ಪತ್ರೆಯ ಡಾ. ಅಕ್ಷಯಕುಮಾರ್, ಭಾನುವಳ್ಳಿ ಆರೋಗ್ಯ ಕೇಂದ್ರದ ಡಾ. ತಿಪ್ಪೇಸ್ವಾಮಿ, ದೇವರಬೆಳಕೆರೆ ಆಸ್ಪತ್ರೆಯ ಡಾ. ನವ್ಯ, ಹಿರಿಯ ಆರೋಗ್ಯಾಧಿಕಾರಿ ವಿಮ್ಮಣ್ಣ, ವೈದ್ಯಾಧಿಕಾರಿ ನಾಗರಾಜ, ಬಿಳಸ್ನೂರು ಆರೋಗ್ಯ ಕೇಂದ್ರದ ಡಿ. ಮಂಜುನಾಥ್ ಮತ್ತು ಕಾರ್ಲಿನ, ಹೇಮ ವೇಮ ಸದ್ಬೋದನವಿದ್ಯಾಪೀಠದಆಡಳಿತಾಧಿಕಾರಿ ಸುಭಾಷ್ ಎಚ್.ಪಿ. ಸಂಸ್ಥೆಯ ಸಿಇಓ ಕುಂಜು ಅಶೋಕ್ ರಾಜ್, ಅಜರುದ್ದೀನ್, ಪ್ರೀತಿ ಆರೈಕೆಟ ಟ್ರಸ್ಟಿನ ಡಾ. ಶಾಹೀದ್, ವಿನೋದ್ ಕುಮಾರ್, ನುಂಕೇಶ್ ಆರ್.ಕೆ ಸೇರಿದಂತೆ ಹಲವರಿದ್ದರು.

### ಸಸಿ ನೆಟ್ಟು ಜನ್ಮದಿನಾಚರಣೆ

ಶ್ರೀ ಮಹಾಯೋಗಿ ವೇಮನ ಸಂಸ್ಥಾನದ ಪೀಠಾಧ್ಯಕ್ಷರಾದ ಶ್ರೀ ವೇಮನಾನಂದ ಸ್ವಾಮೀಜಿಯವರ ಜನ್ಮದಿನವನ್ನು ವೇಮನ ಪಿಯು ಕಾಲೇಜಿನ ಆವರಣದಲ್ಲಿ ಸಸಿ ನೆಡುವ ಮೂಲಕ ಆಚರಿಸಲಾಯಿತು. ಶ್ರೀಬಸವಕುಮಾರ ಶ್ರೀಗಳು, ಹರಿಹರ ಶಾಸಕ ಬಿ.ಪಿ. ಹರೀಶ್, ಮಾಜಿ ಶಾಸಕರಾದ ಟಿ. ಗುರುಸಿದ್ಧನಗೌಡ, ಡಾ. ರವಿಕುಮಾರ್ ಟಿ.ಜಿ ಅವರಿದ್ದರು.

# ಗುರುಲಿಂಗಪ್ಪ ಸಾವಿಗೆ ನ್ಯಾಯ ಒದಗಿಸಿ ಸರ್ಕಾರಿ ನೌಕರರ ಸಂಘ ಆಗ್ರಹ

» **ಚಿತ್ರದುರ್ಗ**

ಚಳ್ಳಕೆರೆ ತಾಲ್ಲೂಕು ಕಚೇರಿ ಸರ್ಕಾರಿ ನೌಕರ ಗುರುಲಿಂಗಪ್ಪ ಸಿ.ಎಂ ಕೆಲಸದ ಒತ್ತಡದಿಂದ ಆತ್ಮಹತ್ಯೆ ಹೊಂದಿದ್ದು ಅವರ ಸಾವಿಗೆ ನ್ಯಾಯ ಒದಗಿಸುವಂತೆ ಆಗ್ರಹಿಸಿ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ ಚಿತ್ರದುರ್ಗ ಜಿಲ್ಲಾ ಶಾಖೆ, ಕರ್ನಾಟಕ ಕಂದಾಯ ಇಲಾಖಾ ನೌಕರರ ಸಂಘ ಚಿತ್ರದುರ್ಗ ಮತ್ತು ಚಳ್ಳಕೆರೆ ಶಾಖೆಯವತಿಯಿಂದ ಇಂದು ಪ್ರತಿಭಟನೆ ನಡೆಸಿ ಜಿಲ್ಲಾಡಳಿತಕ್ಕೆ ಮನವಿ ಸಲ್ಲಿಸಿತು.

ಚಿತ್ರದುರ್ಗ ಜಿಲ್ಲೆಯ ಚಳ್ಳಕೆರೆ ತಾಲ್ಲೂಕಿನ ತಹಶೀಲ್ದಾರ್ ರವರ ಕಚೇರಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಗುರುಲಿಂಗಪ್ಪ ಇವರು ತಮ್ಮ ಸ್ವಗೃಹದಲ್ಲಿ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಆತ್ಮಹತ್ಯೆಗೂ ಮುಂಚಿತವಾಗಿ ಡೆತ್ ನೋಟ್ ಬರೆದಿದ್ದು ಕಚೇರಿಯಲ್ಲಾದ ಅವಮಾನ ಮತ್ತು ನಿರಂತರ ಕೆಲಸದ ಒತ್ತಡದಿಂದ ನಾನು ಆತ್ಮಹತ್ಯೆ ಮಾಡಿಕೊಳ್ಳುತ್ತಿದ್ದೇನೆ ಎಂದು ಸ್ಪಷ್ಟವಾಗಿ ಬರೆದು ಪ್ರಾಣ ಬಿಟ್ಟಿರುತ್ತಾರೆ. ನಿಧನದಿಂದ ಇಬ್ಬರು ಮಕ್ಕಳು, ಕುಟುಂಬ ವರ್ಗಕ್ಕೆ ತುಂಬಲಾರದ ನಷ್ಟವಾಗಿರುತ್ತದೆ. ಕುಟುಂಬದವರಿಗೆ ಸಕಾರದಿಂದ ನೀಡಬಹುದಾದ ಎಲ್ಲಾ ಕ್ಷೇಮುಗಳನ್ನು ಜರೂರು ನೀಡಲು ವಿನಂತಿಸಲಾಯಿತು.ಡೆತ್ ನೋಟ್ ಬರೆದು ನಿಧನ ಹೊಂದಿದ್ದಕ್ಕಾಗಿ ಕಂದಾಯ ಇಲಾಖೆಯ ನೌಕರರನ್ನೊಳಗೊಂಡಂತೆ ಇತರೆ ಎಲ್ಲಾ ಇಲಾಖೆಯ ನೌಕರರ ಮನೋಸ್ಥೈರ್ಯ ಸಂಪೂರ್ಣ ಕುಗ್ಗಿ ಹೋಗಿರುತ್ತದೆ. ಸರ್ಕಾರದ ಸಾಕಷ್ಟು ಯೋಜನೆಗಳಿಂದ ಸಕಾಲ, ರಾಂಕ್, ತುರ್ತು ಹಾಗೂ ಮೇಲಾಧಿಕಾರಿಗಳ ಒತ್ತಡ ಈ ರೀತಿಯಿಂದ ನೌಕರರು ಸಣ್ಣ ಪುಟ್ಟ ತಪ್ಪುಗಳು ಆಗುತ್ತಿರುವುದು ಸಹಜವಾಗಿರುತ್ತದೆ. ಇಂತಹ ತಪ್ಪುಗಳನ್ನೇ ಹಿಡಿದು ನೌಕರರ ಮೇಲೆ ಅಮಾನತ್ತು, ಕ್ರಿಮಿನಲ್ ಕೇಸ್ ಮಾಡುತ್ತಿರುವುದು ನೌಕರರ ನೆಮ್ಮದಿಯನ್ನು ಹಾಳು ಮಾಡಿರುತ್ತದೆ. ಜೊತೆಗೆ ರಜಾ ವೇಳೆಯಲ್ಲಿಯೂ ಸಹ ಕುಟುಂಬದವರೊಂದಿಗೆ ಕಾಲ ಕಳೆಯಲು ಸಮಯ ಇಲ್ಲದಂತೆ ಒತ್ತಡ ಹೇರಲಾಗಿರುತ್ತದೆ.



ಇದರಿಂದ ನೌಕರರಿಗೆ ಮಾನಸಿಕ ನೆಮ್ಮದಿ ಇಲ್ಲದಂತೆ ಬಿ.ಪಿ-ಶುಗರ್, ಆರೋಗ್ಯದಲ್ಲಿ ಏರು-ಪೇರು ಸೇರಿದಂತೆ ಇನ್ನಿತರೆ ತೊಂದರೆಗಳಿಂದ ನೌಕರರು ಈ ರೀತಿಯ ತೀರ್ಮಾನದಿಂದ ಸಾವಿಗೊಳಗಾಗುತ್ತಿದ್ದಾರೆ ಎಂದು ದೂರಿದರು.

ಎಲ್ಲಾ ಇಲಾಖೆಗಳಲ್ಲಿ ಸೃಜನೆಯಾಗಿರುವ ಹುದ್ದೆಗಳು ಇಂದಿಗೂ ಅದೇ ಪ್ರಮಾಣದಲ್ಲಿದ್ದು ಇಂದಿನ ಜನಸಂಖ್ಯೆಗೆ ಅನುಗುಣವಾಗಿ ಸರ್ಕಾರದ ಯೋಜನೆಗಳು ಕಾರ್ಯರೂಪಕ್ಕೆ ತರಲು ಅದೇ ಪ್ರಮಾಣದ ನೌಕರರಿಗೆ ಕಷ್ಟವಾಗುವುದರಿಂದ ಇಲಾಖಾವಾರು ಹೆಚ್ಚು ಹುದ್ದೆಗಳನ್ನು ಸೃಜಿಸಲು ಸರ್ಕಾರದ ಗಮನ ಸೆಳೆಯಬೇಕು, ಅನಾವಶ್ಯಕವಾಗಿ ಮೇಲಧಿಕಾರಿಗಳು ಮಾಡುತ್ತಿರುವ ಕಿರಿ ಕಿರಿಗಳನ್ನು ನಿಲ್ಲಿಸುವಂತೆ ಜಿಲ್ಲೆಯ ಎಲ್ಲಾ ದಂಡಾಧಿಕಾರಿಗಳಿಗೆ ನಿರ್ದೇಶನ ನೀಡಬೇಕಿದೆ.ಸಕಾಲ ರ್‍ಯಾಂಕಿಂಗ್ ಪದ್ಧತಿಯಿಂದ ಮುಕ್ತಗೊಳಿಸಿ ಸರ್ಕಾರ ನಿಗದಿ ಪಡಿಸಿದ ವೇಳೆಯಲ್ಲಿ ಕರ್ತವ್ಯ ನಿರ್ವಹಿಸಲು ಅನುವು ಮಾಡಿಕೊಡಬೇಕಿದೆ. ಸರ್ಕಾರ ನಿಗದಿ ಪಡಿಸಿದ ಕಚೇರಿ ವೇಳೆಯನ್ನು ಹೊರತುಪಡಿಸಿ ಇತರೆ ಸಮಯದಲ್ಲಿ ನೌಕರರಿಗೆ ಕರ್ತವ್ಯದ ಒತ್ತಡವನ್ನು ಹೇರಬಾರದು. ಕಚೇರಿಗಳಲ್ಲಿ ಮೂಲಭೂತ ಸೌಕರ್ಯಗಳನ್ನು ಕಲ್ಪಿಸದೇ ಎಲ್ಲಾ ಕೆಲಸಗಳನ್ನು ಆನ್‌ಲೈನ್‌ನಲ್ಲಿ ಮಾಡುವಂತೆ ಗ್ರಾಮ ಆಡಳಿತ ಅಧಿಕಾರಿಗಳಿಗೆ ಆಗುತ್ತಿರುವ ತೊಂದರೆಯನ್ನು ತಪ್ಪಿಸುವುದು. ಕಂದಾಯ ಇಲಾಖೆಯಲ್ಲಿ ಖಾಲಿ ಇರುವ ಆಡಳಿತ ಅಧಿಕಾರಿ, ರಾಜಸ್ವ ನಿರೀಕ್ಷಕರು, ಪ್ರಥಮ ದರ್ಜೆ ಸಹಾಯಕರು, ದ್ವಿತೀಯ ದರ್ಜೆ ಸಹಾಯಕರ ಹುದ್ದೆಗಳನ್ನು ಶೀಘ್ರವೇ ಭರ್ತಿ ಮಾಡುವುದು ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ವಿವಿಧ ಯೋಜನೆಗಳ ಜೊತೆಗೆ ಬಿಸಿಯೂಟದ ಕಾರ್ಯ ಮುಖ್ಯ ಶಿಕ್ಷಕರಿಗೆ ಹೊರೆಯಾಗಿದ್ದು ಡಿ ದರ್ಜೆ ನೌಕರರ ಹುದ್ದೆ ಶೀಘ್ರವಾಗಿ ಭರ್ತಿ ಮಾಡಲು ಸರ್ಕಾರಕ್ಕೆ ಶಿಫಾರಸ್ಸು ಮಾಡುವಂತೆ ಮನವಿ ಮಾಡಲಾಯಿತು.

ನಮ್ಮ ಜಿಲ್ಲಾ ವ್ಯಾಪ್ತಿಯಲ್ಲಿ ಇಲಾಖಾ ನೌಕರ ಕೆಲಸದ ಒತ್ತಡ ಮತ್ತು ಮೇಲಾಧಿಕಾರಿಗಳ ಕಿರುಕುಳದಿಂದ ಆತ್ಮಹತ್ಯೆ ಮಾಡಿಕೊಂಡು ಸಾವನ್ನಾಪಿದ್ದರು ಸಹ ಜಿಲ್ಲಾಡಳಿತದಿಂದ ಕನಿಷ್ಠ ಸೌಜನ್ಯಕ್ಕೆ ನೌಕರನಿಗೆ ಮತ್ತು ನೌಕರನ ಕುಟುಂಬಕ್ಕೆ ಸಂತ್ವಾನ ತಿಳಿಸದೆ ಇರುವುದು ಅತ್ಯಂತ ವಿಷಾದನೀಯ ಸಂಗತಿಯಾಗಿರುತ್ತದೆ.

ಈ ಪ್ರತಿಭಟನೆಯ ನೇತೃತವವನ್ನು ಜಿಲ್ಲಾಧ್ಯಕ್ಷ ತಿಮ್ಮಾರೆಡ್ಡಿ ವಹಿಸಿದ್ದರು

## ಪ್ರೌಢ ಹಂತದಿಂದಲೇ ಮಕ್ಕಳಿಗೆ ಚುನಾವಣೆಯ ಅರಿವು: ನಾಗಭೂಷಣ್



» **ಚಿತ್ರದುರ್ಗ**

ಪ್ರೌಢ ಹಂತದಿಂದಲೇ ಮಕ್ಕಳಿಗೆ ಚುನಾವಣೆಯ ಬಗ್ಗೆ ಅರಿವು ಮೂಡಿಸುವ ಸಲುವಾಗಿ ತಾಲ್ಲೂಕು ಹಾಗೂ ಜಿಲ್ಲಾ ಮಟ್ಟದ ಸ್ವೀಪ್ ಸ್ಪರ್ಧೆಗಳನ್ನು ಆಯೋಜಿಸಲಾಗುತ್ತಿದೆ ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಎಸ್. ನಾಗಭೂಷಣ್ ಹೇಳಿದರು.ನಗರದ ಗಾರೆಹಟ್ಟಿಯ ಬೃಹನ್ಮಠ ಪ್ರೌಢಶಾಲೆಯಲ್ಲಿ ಮಂಗಳವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಶಾಲಾ ಶಿಕ್ಷಣ ಇಲಾಖೆ ಹಾಗೂ ವ್ಯವಸ್ಥಿತ ಮತದಾರರ ಶಿಕ್ಷಣ ಮತ್ತು ಚುನಾವಣಾ ಪಾಲ್ಗೊಳ್ಳುವಿಕೆ (ಸ್ವೀಪ್) ವತಿಯಿಂದ ಆಯೋಜಿಸಿದ್ದ ರಾಷ್ಟ್ರೀಯ ಮತದಾರರ ದಿನಾಚರಣೆ ಅಂಗವಾಗಿ ಶಾಲಾ-ಕಾಲೇಜು ವಿದ್ಯಾರ್ಥಿಗಳಿಗೆ ಜಿಲ್ಲಾ ಮಟ್ಟದ ಸ್ವೀಪ್ ಸ್ಪರ್ಧೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.ಜನವರಿ 25 ಇಡೀ ದೇಶಾದ್ಯಂತ ರಾಷ್ಟ್ರೀಯ ಮತದಾರರ ದಿನಾಚರಣೆ ಆಚರಿಸಲಾಗುವುದು. ಇದರ ಅಂಗವಾಗಿ ದೇಶದಲ್ಲಿ ಎಲ್ಲೆಡೆ, 18 ವರ್ಷ ತುಂಬಿದ ಯುವಜನರಿಗೆ ಗುರುತಿನ ಚೀಟಿ ಒದಗಿಸುವುದರ ಮೂಲಕ ಈ ದೇಶದ ಭವಿಷ್ಯದ ಬಗ್ಗೆ ನಿರ್ಧರಿಸುವಂತಹ ಅಧಿಕಾರ ಹಾಗೂ ಶಕ್ತಿಯನ್ನು ಕೊಡುವ ಸಮಯ ಇದಾಗಿದೆ ಎಂದರು.ಹೀಗಾಗಿಯೇ ಪ್ರೌಢ ಹಂತದಿಂದಲೇ ಮಕ್ಕಳಿಗೆ ಚುನಾವಣೆಯ ಅರಿವು ಮೂಡಿಸುವ ಸಲುವಾಗಿ ತಾಲ್ಲೂಕು ಹಾಗೂ ಜಿಲ್ಲಾ ಮಟ್ಟದ ಸ್ವೀಪ್ ಸ್ಪರ್ಧೆಗಳನ್ನು ಆಯೋಜಿಸಲಾಗುತ್ತಿದೆ. ಜಿಲ್ಲಾ ಮಟ್ಟದ ಸ್ವೀಪ್ ಸ್ಪರ್ಧೆಗಳಲ್ಲಿ ವಿಜೇತರಾದ ವಿದ್ಯಾರ್ಥಿಗಳು ರಾಜ್ಯ ಮಟ್ಟದಲ್ಲಿ ಭಾಗವಹಿಸವರು. ರಾಜ್ಯ ಮಟ್ಟದ ಚಿತ್ರಕಲೆ ಸ್ಪರ್ಧೆಯಲ್ಲಿ ಕಳೆದ 2 ವರ್ಷಗಳಿಂದಲೂ ನಮ್ಮ ಜಿಲ್ಲೆಯ ವಿದ್ಯಾರ್ಥಿಗಳು ವಿಜೇತರಾಗಿದ್ದರೆ. ಅದೇ ರೀತಿ ಈ ಬಾರಿಯು ಕೂಡ ಚಿತ್ರಕಲೆ ಸ್ಪರ್ಧೆಯಲ್ಲಿ ರಾಜ್ಯ ಮಟ್ಟದಲ್ಲಿ ನಮ್ಮ ಜಿಲ್ಲೆಯ ವಿದ್ಯಾರ್ಥಿಗಳು ವಿಜೇತರಾಗಬೇಕು ಎಂದು ಉತ್ತೇಜನ ನೀಡಿದರು. ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಕೆ.ರವಿಶಂಕರ ರೆಡ್ಡಿ ಮಾತನಾಡಿ, ಮತದಾರರ ಪಟ್ಟಿಗೆ ಹೆಸರು ಸೇರ್ಪಡೆ ಮಾಡಿಕೊಂಡು, ಗುರುತಿನ ಚೀಟಿ ಪಡೆಯುವುದು ಪ್ರತಿಯೊಬ್ಬರ ಆದ್ಯ ಕರ್ತವ್ಯ. ಭಾರತದ ಪೌರತ್ವ ಹೊಂದಿರುವ ನಾವು 18 ವರ್ಷ ತುಂಬಿದ ಪ್ರತಿಯೊಬ್ಬರೂ ಭಾರತ ದೇಶದ ಮತದಾರರಾಗುತ್ತೇವೆ, ಪ್ರತಿಯೊಬ್ಬರು ಗುರುತಿನ ಚೀಟಿಯನ್ನು ಪಡೆದುಕೊಳ್ಳಬೇಕು. ಮಕ್ಕಳು ಕನಸು ಕಾಣಬೇಕು, ಕನಸು ನನಸು ಮಾಡಿಕೊಳ್ಳಲು ಪರಿಶ್ರಮ ಹಾಗೂ ಪ್ರಯತ್ನ ಪಡಬೇಕು, ಭವ್ಯ ದೇಶದ ನಿರ್ಮಾಣಕ್ಕಾಗಿ ಹಾಗೂ ಉತ್ತಮ ಭವಿಷ್ಯಕ್ಕಾಗಿ ವಿದ್ಯಾರ್ಥಿಗಳು ಶಿಕ್ಷಣಕ್ಕೆ ಒತ್ತು ನೀಡಬೇಕು. ಪ್ರಪಂಚದ ಆಗು-ಹೋಗುಗಳ ಬಗ್ಗೆ ತಿಳಿದುಕೊಳ್ಳಬೇಕಾದರೆ ಶಿಕ್ಷಣ ಬಹುಮುಖ್ಯ, ಹೀಗಾಗಿ ತರಬೇತಿ ಕೊಠಡಿಯಲ್ಲಿ ದೇಶದ ಭವಿಷ್ಯವಿದೆ ಎಂದರು.

**ಪ್ರಮುಖ ಸುದ್ದಿ**

# ನಗರಸಭೆ ಸದಸ್ಯರ ಸದಸ್ಯತ್ವ ರದ್ದುಗೊಳಿಸಲು ಆಗ್ರಹ

» **ಚಿತ್ರದುರ್ಗ**

ಹಿರಿಯೂರು ಪೊಲೀಸರು ಬಂಧಿಸಿರುವ ಜೂಜುಕೋರರ ಮೇಲೆ ಸೂಕ್ತ ಕಾನೂನು ಕ್ರಮಕೈಗೊಳ್ಳಬೇಕು. ಜತೆಗೆ ಬಂಧನವಾಗಿರುವ ನಗರಸಭೆ ಸದಸ್ಯರ ಸದಸ್ಯತ್ವ ರದ್ದುಗೊಳಿಸಿ, ರೌಡಿಶೀಟರ್ ಅಜ್ಜಪ್ಪ, ಜಗದೀಶ್ ಇವರನ್ನು ಗಡಿಪಾರು ಮಾಡಬೇಕೆಂದು ಒತ್ತಾಯಿಸಿ ಕರುನಾಡ ವಿಜಯಸೇನ ಪ್ರತಿಭಟನೆ ನಡೆಸಿತು.

ಚಿತ್ರದುರ್ಗದ ಜಿಲ್ಲಾ ಮಂತ್ರಿ ಸುಧಾಕರ್ ರವರ ಕ್ಷೇತ್ರದ ಹಿರಿಯೂರು ನಗರದ ಕೆಲವು ನಗರಸಭಾ ಸದಸ್ಯರ ಕುಮ್ಮಕ್ಕಿನಿಂದ (ಚುನಾಯಿತ ಸದಸ್ಯರು) ಆಕ್ರಮವಾಗಿ ಹಿರಿಯೂರು ತಾಲ್ಲೂಕಿನ ವಿ.ವಿ.ಪುರ ಸರ್ಕಾರಿ ಪ್ರವಾಸಿ ಮಂದಿರದಲ್ಲಿ ಜೂಜು ಆಡುತ್ತಿದ್ದಾಗ ಪೊಲೀಸರು ದಾಳಿ ನಡೆಸಿ, 16 ಜನರನ್ನು ಬಂಧಿಸಿ, ಕೇಸು ದಾಖಲು ಮಾಡಿರುತ್ತಾರೆ. ಇಂತಹ ಚುನಾಯಿತ ಸದಸ್ಯರು ಅಕ್ರಮವಾಗಿ ಜೂಜು ಆಡುವುದನ್ನು ನೋಡಿದರೆ ಇವರುಗಳು ಸಾರ್ವಜನಿಕ ಸೇವೆ ಮಾಡುತ್ತಾರೆಯೇ? ಇಂತಹ ಚುನಾಯಿತ ಸದಸ್ಯರನ್ನು ಅಮಾನತ್ತುಗೊಳಿಸಿ. ಮುಂದೆ ಯಾವುದೇ




ಚುನಾವಣೆಯಲ್ಲಿ ಸ್ಪರ್ಧಿಸದಂತೆ ಸೂಕ್ತ ಕಾನೂನು ಕ್ರಮ ಕೈಗೊಳ್ಳಬೇಕು. ಇಂತಹವರಿಂದ ಸಮಾಜದ ಮೇಲೆ ಅಡ್ಡ ಪರಿಣಾಮಗಳು ಬೀರುವುದು ಎಂದು ತಿಳಿಸಿದ್ದಾರೆ.

ಚುನಾಯಿತ ಸದಸ್ಯರು ಕಾಂಗ್ರೆಸ್ ಪಕ್ಷಕ್ಕೆ ಸೇರಿದವರಾಗಿದ್ದು, ಚಿತ್ರದುರ್ಗ ಜಿಲ್ಲಾ ಉಸ್ತುವಾರಿ ಸಚಿವರು ಈ ಬಗ್ಗೆ ಕ್ರಮ ಕೈಗೊಳ್ಳದೇ ತಮ್ಮ ಪಕ್ಷದವರೆಂದು ಅವರಿಗೆ ಕುಮ್ಮಕ್ಕು ನೀಡಿ, ಮೌನಕ್ಕೆ ಶರಣರಾಗಿರುತ್ತಾರೆ. ಅಜ್ಜಪ್ಪ ಇವರ ಮೇಲೆ ಈ ಹಿಂದೆ ರೌಡಿಶೀಟರ್ ಕೇಸು ಇದ್ದು, ಸದಸ್ಯರಾದ ಜಗದೀಶ್ ಇವರ ಮೇಲು ಕೇಸು ಇದ್ದು, ಇವರುಗಳನ್ನು ಈ ಕೂಡಲೇ ಪಕ್ಷದಿಂದ ಉಚ್ಚಾಟನೆ ಮಾಡಬೇಕು. ಹಾಗೂ ಮಾನ್ಯ ಜಿಲ್ಲಾ ಉಸ್ತುವಾರಿ ಸಚಿವರಾದ ನೀವು ಕೂಡಲೇ ಮುಖ್ಯಮಂತ್ರಿಗಳಿಗೆ ಗೃಹಸಚಿವರಿಗೆ ಜಿಲ್ಲಾ ಪೊಲೀಸ್ ಅಧೀಕ್ಷಕರಿಗೆ ಮತ್ತು ಸಂಬಂಧಪಟ್ಟ ಇಲಾಖೆಗೆ ಪತ್ರ ಬರೆದು ನಗರಸಭಾ ಸದಸ್ಯರು ಸೇರಿದಂತೆ ಬಂಧಿತ ಎಲ್ಲಾ ಆರೋಪಿಗಳ ಸೂಕ್ತ ಕಾನೂನು ಕ್ರಮ ಕೈಗೊಳ್ಳುವಂತೆ ಹಾಗೂ ಅನಿಲ್ ಕುಮಾರ್, ಅಜ್ಜಪ್ಪ ಮತ್ತು ಜಗದೀಶ್ ಇವರುಗಳನ್ನು ಗಡಿಪಾರು ಮಾಡಲು ತಾವೇ ಬಹಿರಂಗ ಪತ್ರ ಬರೆಯಬೇಕೆಂದು ಒತ್ತಾಯಿಸಲಾಯಿತು.

ವಿ.ವಿ.ಸಾಗರವು ನಾಲ್ವಡಿ ಕೃಷ್ಣರಾಜ ಒಡೆಯರ್‌ರವರ ತಾಯಿ ಕೆಂಪ ನಂಜಮಣಿ ವಾಣಿವಿಲಾಸ ಹೆಸರಿನಲ್ಲಿ 2898 ರಿಂದ 1907 ರಲ್ಲಿ ಕಾಲದಲ್ಲಿ ನಿರ್ಮಾಣವಾಗಿದ್ದು, ಸದರಿ ವಿ.ವಿ.ಸಾಗರಕ್ಕೆ ಭಾಗಿನ ಅರ್ಪಿಸಲು ಸಹ ಅಧಿಕಾರಿಗಳಿಂದ ಅನುಮತಿ ಪಡೆಯಬೇಕಾಗಿರುತ್ತಾರೆ.

ಆದರೆ ಇಂತಹ ಐತಿಹಾಸಿಕ ಪ್ರವಾಸಿ ತಾಣದ ಐಬಿಯಲ್ಲಿ ಜೂಜು ಅಡ್ಡೆ ನಡೆಯುತ್ತಿರುವುದು ಈ ವ್ಯಾಪ್ತಿಯ ವಿಶ್ವೇಶ್ವರಯ್ಯ ಜಲನಿಗಮದ ಸಹಾಯಕ ಇಂಜಿನಿಯರ್ ವಿಜಯಕುಮಾರ್, ಸೆಕ್ಷನ್ ಆಫೀಸರ್ ನಂಜೇಗೌಡ ಈ ಅಧಿಕಾರಿಗಳ ನಿರ್ಲಕ್ಷ್ಯ ಮತ್ತು ಇಷ್ಟೊಂದು ಜನರು ಈ ಸ್ಥಳದಲ್ಲಿ ಜೂಜು ಆಡಲು ಅಧಿಕಾರಿಗಳ ಒಳ ಒಪ್ಪಂದ ಇದ್ದೇ ಇರುತ್ತೆ. ಪ್ರಯುಕ್ತ ಈ ಸಂಬಂಧಿಸಿದ ಅಧಿಕಾರಿಗಳನ್ನು ಸಹ ಕೂಡಲೇ ಅಮಾನತ್ತುಗೊಳಿಸಿ, ತಪ್ಪಿತಸ್ಥರಾದ ಮೇಲ್ಕಂಡ ಬಂಧಿತರಾದ 36 ಜನರ ಮೇಲೆ ಸೂಕ್ತ ಕಾನೂನು ಕ್ರಮ ಕೈಗೊಂಡು ಚುನಾಯಿತ ಸದಸ್ಯತ್ವವನ್ನು ರದ್ದುಗೊಳಿಸಲು ಆದೇಶಿಸಬೇಕೆಂದು ಕರುನಾಡ ವಿಜಯಸೇನೆ ಜಿಲ್ಲಾ ಸಮಿತಿ ಸರ್ಕಾರವನ್ನು ಮತ್ತು ಜಿಲ್ಲಾಡಳಿತವನ್ನು ಒತ್ತಾಯಿಸಿದೆ. ಜಿಲ್ಲಾಧ್ಯಕ್ಷ ಕೆ.ಟಿ.ಶಿವಕುಮಾರ್, ಮಹಿಳಾ ಜಿಲ್ಲಾಧ್ಯಕ್ಷೆ ವೀಣಾ ಗೌರಣ್ಣ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಗೋಪಿನಾಥ್, ಜಿಲ್ಲಾ ಕಾರ್ಯದರ್ಶೀ ಜಗದೀಶ್, ಉಪಾಧ್ಯಕ್ಷ ರತ್ನಮ್ಮ, ಜಿಲ್ಲಾ ಯುವ ಘಟಕದ ಅಧ್ಯಕ್ಷ ನಾಗರಾಜ್ ಮುತ್ತು, ನಗರಾಧ್ಯಕ್ಷ ಅವಿನಾಶ್, ಮುಖಂಡರಾದ ಮಹ್ಮಮದ್ ರಫಿ, ಶಾನ್, ಮಣಿ, ಹರೀಶ್ ಸೇರಿದಂತೆ ಇತರರು ಭಾಗವಹಿಸಿದ್ದರು.

## ಫಾಸ್ಟ್ ನ್ಯೂಸ್

### ಶಾಂತಕುಮಾರಿ ನೇಮಕ

» **ಚಳ್ಳಕೆರೆ**



ಪದವಿಪೂರ್ವ ಶಾಲಾ ಶಿಕ್ಷಣ ಇಲಾಖೆ ರಾಜ್ಯದ 32 ಜಿಲ್ಲೆಗಳಿಗೆ ರಾಷ್ಟ್ರೀಯ ಸೇವಾ ಯೋಜನೆಯ ಘಟಕಗಳ ಕಾರ್ಯನಿರ್ವಹಣೆ ಕುರಿತು ಮಾಹಿತಿ ನೀಡಲು 32 ಜಿಲ್ಲಾ ಮಟ್ಟದ ನೋಡಲ್ ಅಧಿಕಾರಿಗಳನ್ನು ನೇಮಿಸಿ ಆದೇಶ ಹೊರಡಿಸಿದೆ. ಜಿಲ್ಲೆಯ ರಾಷ್ಟ್ರೀಯ ಸೇವಾ ಯೋಜನಾ ಘಟಕದ ನೋಡಲ್ ಅಧಿಕಾರಿಯಾಗಿ ನಗರದ ಸರ್ಕಾರಿ ಪದವಿಪೂರ್ವ ಕಾಲೇಜಿನ ಎನ್‌ಎಸ್‌ಎಸ್ ಅಧಿಕಾರಿ ಬಿ.ಶಾಂತ ಕುಮಾರಿಯವರನ್ನು ಜಿಲ್ಲಾ ಘಟಕದ ಎನ್‌ಎಸ್‌ಎಸ್ ನೋಡಲ್ ಅಧಿಕಾರಿಯಾಗಿ ನೇಮಿಸಿ ಶಿಕ್ಷಣ ಇಲಾಖೆ ಆದೇಶ ಹೊರಡಿಸಿದೆ. ಎನ್‌ಎಸ್‌ಎಸ್ ಘಟಕನಾಧಿಕಾರಿ ಬಿ.ಶಾಂತಕುಮಾರಿ, ಕಳೆದ ಹಲವಾರು ವರ್ಷಗಳಿಂದ ರಾಷ್ಟ್ರೀಯ ಸೇವಾ ಯೋಜನಾ ಘಟಕದಲ್ಲಿ ಉತ್ತಮವಾಗಿ ಕಾರ್ಯನಿರ್ವಹಿಸಿದ ಹಿನ್ನೆಲೆಯಲ್ಲಿ ಕಳೆದ ತಿಂಗಳು ರಾಜ್ಯಮಟ್ಟದ ಉತ್ತಮ ಎನ್‌ಎಸ್‌ಎಸ್ ಅಧಿಕಾರಿ ಎಂದು ಪ್ರಶಸ್ತಿ ನೀಡಿ ಗೌರವಿಸಲಾಗಿತ್ತು. ಇದರ ಬೆನ್ನಹಿಂದೆಯೇ ಈಗ ಬಿ.ಶಾಂತಕುಮಾರಿಯವರಿಗೆ ಜಿಲ್ಲಾ ಮಟ್ಟದ ಎನ್‌ಎಸ್‌ಎಸ್ ಘಟಕದ ನೋಡಲ್ ಅಧಿಕಾರಿಯಾಗಿ ಎರಡು ವರ್ಷಗಳ ಅವಧಿಗೆ ಸರ್ಕಾರ ನೇಮಿಸಿದೆ.ಪತ್ರಿಕೆಯೊಂದಿಗೆ ತಮ್ಮ ಸಂತಸ ಹಂಚಿಕೊಂಡ ಜಿಲ್ಲಾ ನೋಡಲ್ ಅಧಿಕಾರಿ ಬಿ.ಶಾಂತಕುಮಾರಿ, ರಾಷ್ಟ್ರೀಯ ಸೇವಾ ಯೋಜನಾ ಘಟಕದ ಎಲ್ಲಾ ಕಾರ್ಯಕ್ರಮಗಳನ್ನು ಗ್ರಾಮೀಣ ಪ್ರದೇಶದಲ್ಲಿ ಹೆಚ್ಚು ನಡೆಸಬೇಕೆಂಬ ಉದ್ದೇಶ ನನ್ನದು. ಕಳೆದ ಎರಡು ವರ್ಷಗಳಿಂದ ನಿರಂತರವಾಗಿ ಈ ಕಾರ್ಯಕ್ರಮವನ್ನು ಗ್ರಾಮೀಣ ಮಟ್ಟದಲ್ಲಿ ಹಮ್ಮಿಕೊಂಡು ಅಲ್ಲಿನ ಸಮಸ್ಯೆಗಳ ಬಗ್ಗೆ ಗಮನಹರಿಸಿದ್ದೆ. ಇದನ್ನು ಗುರುತಿಸಿದ ಅಧಿಕಾರಿಗಳು ಜಿಲ್ಲಾ ಮಟ್ಟದ ಜವಾಬ್ದಾರಿ ನೀಡಿರುವುದು ನನಗೆ ಸಂತಸ ತಂದಿದೆ. ಜಿಲ್ಲಾ ಮಟ್ಟದ ನೋಡಲ್ ಅಧಿಕಾರಿಯಾಗಿ ರಾಷ್ಟ್ರೀಯ ಸೇವಾ ಯೋಜನಾ ಘಟಕದ ಕಾರ್ಯಕ್ರಮಗಳನ್ನು ಮತ್ತಷ್ಟು ಜನರಿಗೆ ತಲುಪಿಸುವ ಕಾರ್ಯಮಾಡುವೆ ಎಂದರು.

### ದೊಡ್ಡ ಉಳ್ಳಾರ್ತಿಗೆ ಹೋಬಳಿ ಕೇಂದ್ರದ ಮಾನ್ಯತೆ ನೀಡಲು ಸಚಿವರಿಗೆ ಮನವಿ

» **ಚಳ್ಳಕೆರೆ**



ತಾಲ್ಲೂಕಿನ ಮೊಳಕಾಲ್ಮೂರು ವಿಧಾನಸಭಾ ಕ್ಷೇತ್ರದ ದೊಡ್ಡಉಳ್ಳಾರ್ತಿ ಗ್ರಾಮವನ್ನು ಹೋಬಳಿ ಕೇಂದ್ರವನ್ನಾಗಿ ಪರಿವರ್ತಿಸುವಂತೆ ಜಿಲ್ಲಾ ಅಮೃತ ಮಹಲ್ ಕಾವಲ್ ಹೋರಾಟ ಸಮಿತಿ ಜಿಲ್ಲಾಧ್ಯಕ್ಷ ದೊಡ್ಡ ಉಳ್ಳಾರ್ತಿಕರಿಯಣ್ಣ ಕಂದಾಯ ಸಚಿವರಿಗೆ ಮನವಿ ಮಾಡಿದ್ದಾರೆ. ಇಲ್ಲಿನ ತಹಶೀಲ್ದಾರ್ ಮೂಲಕ ಕಂದಾಯ ಸಚಿವರಿಗೆ ಮನವಿ ಮಾಡಿದ್ದು, ದೊಡ್ಡ ಉಳ್ಳಾರ್ತಿ ಹೋಬಳಿ ಕೇಂದ್ರವಾದರೆ ಆಂಧ್ರದ ಗಡಿಭಾಗದಲ್ಲಿರುವ ಹಲವಾರು ಗ್ರಾಮಗಳಿಗೆ ಹೆಚ್ಚು ಸಹಾಯಕವಾಗಲಿದೆ. ಪ್ರಸ್ತುತ ದೊಡ್ಡ ಉಳ್ಳಾರ್ತಿಯಲ್ಲಿ ಸಾರ್ವಜನಿಕ ಆಸ್ಪತ್ರೆ, ಪಶು ಆಸ್ಪತ್ರೆ, ಬೆಸ್ಕಾಂ, ಗ್ರಂಥಾಲಯ, ಪ್ರೌಢಶಾಲೆ, ಬ್ಯಾಂಕ್‌ಳಿದ್ದು, ಸುತ್ತಮುತ್ತ ಸುಮಾರು ಆರು ಗ್ರಾಮ ಪಂಚಾಯಿತಿ ವ್ಯಾಪ್ತಿಯ 40ಕ್ಕೂ ಹೆಚ್ಚು ಗ್ರಾಮಗಳ ಗ್ರಾಮಸ್ಥರು ಅನಿವಾರ್ಯವಾಗಿ ತಳುಕಿಗೆ ತೆರಳಬೇಕಿದೆ. ಗಡಿಭಾಗದ ಗ್ರಾಮಗಳಿಂದ ತಳಕಿಗೆ ಬಸ್ ವ್ಯವಸ್ಥೆ ಇಲ್ಲ. ದೊಡ್ಡ ಉಳ್ಳಾರ್ತಿಗೆ ಹೋಬಳಿ ಸ್ಥಾನ ನೀಡಿದಲ್ಲಿ ಸುತ್ತಮುತ್ತಲ ಗ್ರಾಮಸ್ಥರಿಗೆ ತಮ್ಮ ಕೆಲಸ ಕಾರ್ಯಗಳಿಗೆ ಹೆಚ್ಚು ಸಹಾಯ ಮಾಡಿದಂತಾಗುತ್ತದೆ. ಈ ಬಗ್ಗೆ ಕಂದಾಯ ಸಚಿವರು ಗಮನಹರಿಸಿ ದೊಡ್ಡ ಉಳ್ಳಾರ್ತಿಯನ್ನು ಹೋಬಳಿ ಕೇಂದ್ರವನ್ನಾಗಿ ಪರಿವರ್ತಿಸಬೇಕೆಂದು ಒತ್ತಾಯಿಸಿದ್ದಾರೆ. ಮನವಿ ಸ್ವೀಕರಿಸಿ ಮಾತನಾಡಿದ ತಹಶೀಲ್ದಾರ್ ರೇಹಾನ್‌ಪಾಷ,ತಮ್ಮ ಮನವಿಯನ್ನು ಜಿಲ್ಲಾಧಿಕಾರಿಗಳ ಮೂಲಕ ಸರ್ಕಾರಕ್ಕೆ ಕಳಿಸುವ ಭರವಸೆ ನೀಡಿದ್ದಾರೆ. ಈ ಸಂದರ್ಭದಲ್ಲಿ ಗ್ರಾಮಸ್ಥರಾದ ಧನಂಜಯ, ರಾಕೇಶ್, ಶಾರದಮ್ಮ ಮುಂತಾದವರು ಉಪಸ್ಥಿತರಿದ್ದರು.

### ಹಿಂಬದಿ ಟಯರ್‌ಗೆ ಕಲ್ಲು ಇಡುವಾಗ ಟ್ರ್ಯಾಕ್ಟರ್ ಚಲಿಸಿ ಡ್ರೈವರ್ ಸ್ಥಳದಲ್ಲೇ ಸಾವು

» **ಚಳ್ಳಕೆರೆ**

ಇಲ್ಲಿನ ರಾಷ್ಟ್ರೀಯ ಹೆದ್ದಾರಿ ಲಕ್ಷ್ಮೀಪುರದ ಬಳಿ ಡೆಸ್ಟನ್ನು ತುಂಬಿದ್ದ ಟ್ರ್ಯಾಕ್ಟರ್ ಅನ್‌ಲೋಡ್ ಮಾಡಲು ನಿಲ್ಲಿಸಿದ ಸಂದರ್ಭದಲ್ಲಿ ಟ್ರ್ಯಾಕ್ಟರ್ ಚಾಲಕ ಹಿಂಬದಿಯ ಟಯರ್‌ಗೆ ಕಲ್ಲು ಇಡುವಾಗ ಟ್ರ್ಯಾಕ್ಟರ್ ಮುಂದಕ್ಕೆ ಚಲಿಸಿ ಚಾಲಕನ ಮೇಲೆಯೇ ಹರಿದಪರಿಣಾಮ ಚಾಲಕ ಸ್ಥಳದಲ್ಲೇ ಮೃತಪಟ್ಟಿರುತ್ತಾನೆ. ಹಿರೇಮಧುರೆ ಗ್ರಾಮದ ಬಸವರೆಡ್ಡಿ(49) ಮೃತಪಟ್ಟ ಚಾಲಕನಾಗಿದ್ದು ಚಳ್ಳಕೆರೆ ಪೊಲೀಸರು ಪ್ರಕರಣ ದಾಖಲಿಸಿ ತನಿಖೆ ಮುಂದುವರೆಸಿದ್ದಾರೆ.

# ಟಿಕೆಟ್ ನೀಡಿದರೆ ಚಿತ್ರದುರ್ಗದಿಂದ ಸ್ಪರ್ಧೆ

» **ಚಿತ್ರದುರ್ಗ**

ಚಿತ್ರದುರ್ಗ ಲೋಕಸಭಾ ಕ್ಷೇತ್ರಕ್ಕೆ ಹೊರಗಿನಿಂದ ಬಂದವರಿಗೆ ಹೆಚ್ಚು ಮಣೆ ಹಾಕುವ ಊರಾಗಿದೆ. ಜಿಲ್ಲೆಯ ಅಭಿವೃದ್ಧಿ ದೃಷ್ಟಿಯಿಂದ ಸ್ಥಳೀಯರು ಬರಬೇಕು. ನಾನು ಸ್ಥಳೀಯನಾಗಿರುವುದರಿಂದ ಇಲ್ಲಿನ ಸಮಸ್ಯೆಗಳು ಚೆನ್ನಾಗಿ ತಿಳಿದಿವೆ. ಹಾಗಾಗಿ ಸ್ಥಳೀಯರಿಗೆ ಟಿಕೇಟ್ ಕೊಟ್ಟರೆ ಹೆಚ್ಚು ಅನುಕೂಲವಾಗಲಿದೆ ಎಂದು ದೇವರಾಜ್ ಅರಸು ಶಿಕ್ಷಣ ಸಂಸ್ಥೆಯ ಸಿಇಓ ಎಂ.ಸಿ.ರಘುಚಂದನ್ ತಿಳಿಸಿದ್ದಾರೆ.

ಕಾಂಗ್ರೆಸ್ ಅಥವಾ ಬಿಜೆಪಿ ರಾಷ್ಟ್ರೀಯ ಪಕ್ಷಗಳಾಗಿರುವುದರಿಂದ ಬೇರೆ ಬೇರೆ ಲೆಕ್ಕಾಚಾರದಲ್ಲಿ ಟಿಕೇಟ್ ನೀಡುವುದು ಇದ್ದೇ ಇರುತ್ತದೆ. ಕಳೆದ ಲೋಕಸಭೆ ಚುನಾವಣೆ ಸಂದರ್ಭದಲ್ಲೇ ನಾನು ಪಕ್ಷದ ಬಿಜೆಪಿ ಪಕ್ಷದಿಂದ ಟಿಕೇಟ್ ಕೇಳದ್ದೆ. ಆದರೆ, ವಯಸ್ಸಿನ ಅಂತರದ ಕಾರಣಕ್ಕೆ ಹಿಂದೆ ಸರಿಯಲಾಗಿತ್ತು. ಈಗ ಮತ್ತೆ ಲೋಕಸಭೆಗೆ ಚುನಾವಣೆ ಹತ್ತಿರವಾಗುತ್ತಿದೆ. ಈಗಾಗಲೇ ಪಕ್ಷದ ವರಿಷ್ಠರ ವಲಯದಲ್ಲಿ ಒಂದು ಸುತ್ತಿನ ಮಾತುಕತೆ ನಡೆಸಿದ್ದೇನೆ ಎಂದರು.

> ಸಮೀಕ್ಷೆ ಆಧಾರದಲ್ಲೇ ನಮ್ಮ ಪಕ್ಷದಲ್ಲಿ ಟಿಕೇಟ್ ನೀಡುವುದು. ಹಾಗಾಗಿ ನಾನು ಕೂಡಾ ಆಕಾಂಕ್ಷಿ ಎಂದು ವರಿಷ್ಠರ ಬಳಿ ಹೇಳಿದ್ದೇನೆ. ಸಂವಿಧಾನದಲ್ಲಿ ಯಾರು ಬೇಕಾದರೂ ಸ್ಪರ್ಧಿಸಲು ಅವಕಾಶ ಇರುವುದರಿಂದ ಈ ಬೇಡಿಕೆ ಇಟ್ಟಿದ್ದೇನೆ ಒಂದು ವೇಳೆ ನಮಗೆ ಟಿಕೇಟ್ ಸಿಕ್ಕಿದರೆ ಇಡೀ ಕ್ಷೇತ್ರ ಸುತ್ತಾಡಿ ಚುನಾವಣೆ ನಡೆಸುತ್ತೇವೆ. ಎ.ನಾರಾಯಣಸ್ವಾಮಿ ಅಥವಾ ಬೇರೆ ಯಾರಿಗೆ ಕೊಟ್ಟರೂ ಹೊಳಲ್ಕೆರೆ ಕ್ಷೇತ್ರದಲ್ಲಿ ಕೆಲಸ ಮಾಡುತ್ತೇವೆ
>
> ▪ **ಎಂ.ಸಿ.ರಘುಚಂದನ್**



ವಿವಿಧ ಹಂತದ ನಾಯಕರ ಜೊತೆಗೆ ಟಿಕೇಟ್ ಕುರಿತು ಮಾತುಕತೆ ನಡೆಸಿದ್ದೇನೆ. ಸಕಾರಾತ್ಮಕವಾಗಿ ಸ್ಪಂದಿಸಿದ್ದಾರೆ ಅಂತಿಮವಾಗಿ ನಮ್ಮದು ಶಿಸ್ತಿನ ಪಕ್ಷ. ಯಾರಿಗೇ ಟಿಕೇಟ್ ಕೊಟ್ಟರೂ ಕೆಲಸ ಮಾಡುತ್ತೇವೆ. ಸಂಸದೀಯ ಮಂಡಳಿಯಲ್ಲಿ ತೀರ್ಮಾನ ಮಾಡಿ ಟಿಕೇಟ್ ನೀಡುವುದು ನಮ್ಮ ಪಕ್ಷದ ಪದ್ಧತಿ. ಅಲ್ಲಿಯ ತೀರ್ಮಾನಕ್ಕೆ ಬದ್ಧರಾಗಿರುತ್ತೇವೆ ಎಂದು ತಿಳಿಸಿದರು.

ಚಿತ್ರದುರ್ಗ ಲೋಕಸಭಾ ಕ್ಷೇತ್ರ ಎನ್ನುವುದು ಒಂದು ರೀತಿಯಲ್ಲಿ ಲಾಡ್ಜ್ ರೀತಿಯಲ್ಲಿ ಆಗಿದೆ. ಇಲ್ಲಿ ಯಾರ ಬೇಕಾದರು ಬಂದು ಚುನಾವಣೆಯಲ್ಲಿ ನಿಲ್ಲಬಹುದಾಗಿದೆ. ಮತದಾರರು ಸಹಾ ಹೊರಗಿನವರಿಗೆ ಮತವನ್ನು ನೀಡುವುದರ ಮೂಲಕ ಗೆಲ್ಲಿಸುತ್ತಾರೆ. ಸ್ಥಳಿಯವಾಗಿ ಇರುವವರಿಗೆ ಪ್ರಾತಿನಿಧ್ಯ ನೀಡಿದರೆ ಮಾತ್ರ ಸ್ಥಳಿಯವಾಗಿ ಇರುವ ಸಮಸ್ಯೆಗಳಿಗೆ ಪರಿಹಾರವನ್ನು ಕಂಡುಕೊಳ್ಳಲು ಸಾಧ್ಯವಿದೆ. ಈ ಹಿನ್ನಲೆಯಲ್ಲಿ ನಾನು ಸಹಾ ಮುಂದಿನ ಲೋಕಸಭಾ ಚುನಾವಣೆಯಲ್ಲಿ ಸ್ಪರ್ಧೆ ಮಾಡಬೇಕೆಂಬ ಆಸೆಯನ್ನು ಹೊಂದಿದ್ದೇನೆ. ಪಕ್ಷದ ಹೈಕಮಾಂಡ್ ಯಾವ ರೀತಿ ತೀರ್ಮಾನ ನೀಡುತ್ತದೇ ಅದರಂತೆ ನಡೆಯಲಾಗುವುದೆಂದು ಹೇಳಿದರು.

ಈಗಾಗಲೇ ಚಿತ್ರದುರ್ಗ ಲೋಕಸಭೆ ಕ್ಷೇತ್ರ ಕುರಿತು ಪಕ್ಷದಿಂದ ಮೂರು ಬಾರಿ ಸಮೀಕ್ಷೆ ಮಾಡಿದ್ದಾರೆ. ಸಮೀಕ್ಷೆ ಆಧಾರದಲ್ಲೇ ನಮ್ಮ ಪಕ್ಷದಲ್ಲಿ ಟಿಕೇಟ್ ನೀಡುವುದು. ಹಾಗಾಗಿ ನಾನು ಕೂಡಾ ಆಕಾಂಕ್ಷಿ ಎಂದು ವರಿಷ್ಠರ ಬಳಿ ಹೇಳಿದ್ದೇನೆ. ಸಂವಿಧಾನದಲ್ಲಿ ಯಾರು ಬೇಕಾದರೂ ಸ್ಪರ್ಧಿಸಲು ಅವಕಾಶ ಇರುವುದರಿಂದ ಈ ಬೇಡಿಕೆ ಇಟ್ಟಿದ್ದೇನೆ ಒಂದು ವೇಳೆ ನಮಗೆ ಟಿಕೇಟ್ ಸಿಕ್ಕಿದರೆ ಇಡೀ ಕ್ಷೇತ್ರ ಸುತ್ತಾಡಿ ಚುನಾವಣೆ ನಡೆಸುತ್ತೇವೆ. ಎ.ನಾರಾಯಣಸ್ವಾಮಿ ಅಥವಾ ಬೇರೆ ಯಾರಿಗೆ ಕೊಟ್ಟರೂ ಹೊಳಲ್ಕೆರೆ ಕ್ಷೇತ್ರದಲ್ಲಿ ಕೆಲಸ ಮಾಡುತ್ತೇವೆ ಎಂದು ಉತ್ತರಿಸಿದರು.

ಕಳೆದ ಲೋಕಸಭೆ ಚುನಾವಣೆ ವೇಳೆ ಎ.ನಾರಾಯಣಸ್ವಾಮಿ ಅವರನ್ನು ಗೆಲ್ಲಿಸಿಕೊಂಡು ಬರಬೇಕು ಎಂದು ಪಕ್ಷ ಸೂಚನೆ ಕೊಟ್ಟಿತ್ತು. 2018ರ ವಿಧಾನಸಭೆ ಚುನಾವಣೆಯಲ್ಲಿ ಹೊಳಲ್ಕೆರೆ ಕ್ಷೇತ್ರದಲ್ಲಿ ನಮ್ಮ ತಂದೆ ಎಂ.ಚಂದ್ರಪ್ಪ 40 ಸಾವಿರ ಮತಗಳ ಅಂತರದಿಂದ ಗೆದ್ದಿದ್ದರು. ಎ.ನಾರಾಯಣಸ್ವಾಮಿ ಅವರನ್ನೂ ಅಷ್ಟೇ ಅಷ್ಟೇ ಅಂತರದ ಮತಗಳನ್ನು ಕೊಡಿಸಿದ್ದೇವೆ ಎಂದು ತಿಳಿಸಿದರು.

## ಅರಮನೆ ಆಂಜನೇಯಸ್ವಾಮಿ ಜಯಂತೋತ್ಸವ

» **ಹೊಸದುರ್ಗ**

ತಾಲೂಕಿನ ಐತಿಹಾಸಿಕ ನೀರಗುಂದ ಗ್ರಾಮದ ಶ್ರೀ ಅರಮನೆಯ ಆಂಜನೇಯಸ್ವಾಮಿ ಹನುಮ ಜಯಂತಿ ಮಹೋತ್ಸವವು ಡಿ.23 ಹಾಗೂ 24ರಂದು ನಡೆಯಲಿದೆ.

ಶನಿವಾರ ಹಾಗೂ ಭಾನುವಾರ ಬೆಳಿಗ್ಗೆಯಿಂದ ಸಂಜೆವರೆಗೂ ಮಹಾಗಣಪತಿ ಪೂಜೆ, ಸ್ವಾಮಿಯವರಿಗೆ ಪುಣ್ಯಹಃ, ಪಂಚಾಮೃತ ಅಭಿಷೇಕ, ಮಹಾಮಂಗಳಾರತಿ, ತೀರ್ಥ ಪ್ರಸಾದ ವಿನಿಯೋಗ ಭಾನುವಾರ ಸಂಜೆ 6 ಗಂಟೆಗೆ ದೀಪೋತ್ಸವ, ರಾಜಬೀದಿ ಉತ್ಸವ ಹಾಗೂ ಗ್ರಾಮಸ್ಥರಿಂದ ಭಜನೆ ಕಾರ್ಯಕ್ರಮಗಳು ನಡೆಯಲಿವೆ.

ಬರದ ನಡುವೆಯೂ ಧಾರ್ಮಿಕ ಶ್ರದ್ಧೆಯ ಹಿನ್ನೆಲೆಯಲ್ಲಿ ಭಕ್ತರ ಸಹಕಾರದೊಂದಿಗೆ ಜಯಂತ್ಯುತ್ಸವ ಆಚರಿಸಲು ಗ್ರಾಮದ ಶ್ರೀ ಮಾರುತಿ ಸೇವಾ ಸಮಿತಿಯವರು ತಯಾರಿ ನಡೆಸಿದ್ದಾರೆ. ಹನುಮ ಜಯಂತಿಯಂದು ನಾಡಿನಲ್ಲಿ ಶ್ರೀ ಆಂಜನೇಯಸ್ವಾಮಿ ಜಯಂತೋತ್ಸವ ನಡೆಯುತ್ತದೆ. ಅದರಂತೆ ತಾಲೂಕಿಗೆ ಮಾದರಿಯಾದ ಸುಮಾರು 17 ಅಡಿ ಎತ್ತರ ಹಾಗೂ 6 ಅಡಿ ಅಗಲವಿರುವ ಪುರಾತನ ಕಾಲದ ಈ ಅರಮನೆ ಆಂಜನೇಯಸ್ವಾಮಿ ಉತ್ಸವ ನಡೆಸಲು ವಿಶೇಷ ತಯಾರಿ ನಡೆಸಿದ್ದಾರೆ. ಈ ಧಾರ್ಮಿಕ ಕಾರ್ಯಕ್ಕೆ ಒಂದು ತಿಂಗಳಿನಿಂದ



ಸಿದ್ಧತೆ ನಡೆಯುತ್ತಿದೆ. ದೇಗುಲ ಸೇರಿ ಗ್ರಾಮದ ಪ್ರಮುಖ ಬೀದಿಗಳನ್ನು ಶೃಂಗಾರಗೊಳಿಸುತ್ತಿದ್ದಾರೆ. ಗ್ರಾಮದ ಐತಿಹಾಸಿಕ ಕೆರೆಯ ಪಶ್ಚಿಮಕ್ಕೆ ಇರುವ ಈ ದೇಗುಲದ ಪೂರ್ವಕ್ಕೆ ಅರಮನೆಯ ದಿಬ್ಬ, ಕೋಟೆಕೊತ್ತಲಗಳ ಕುರುಗಳಿವೆ. ಹಾಗಾಗಿಯೇ ಅರಮನೆ ಆಂಜನೇಯನೆಂದು ಪ್ರಸಿದ್ಧಿಯಾಗಿದೆ.

ಮೂಲ ದೇವರು ನೆಲಮಟ್ಟದಿಂದ 6 ಎತ್ತರವಿತ್ತು. ಸುಮಾರು ಹತ್ತು ಅಡಿ ಭೂಮಿಯ ಒಳಗೆ ವಿಗ್ರಹವಿತ್ತು. ಅವಸಾನದ ಅಂಚಿನಲ್ಲಿದ್ದ ದೇಗುಲವನ್ನು ಜೀರ್ಣೋದ್ಧಾರ ಮಾಡಲಾಗಿದೆ. ಈ ಗ್ರಾಮದ ಪೂರ್ವ ದಿಕ್ಕಿಗೂ ಮತ್ತೊಂದು ಆಂಜನೇಯ ದೇವರು ವಿದ್ಯುತ್ ಗ್ರಾಮದಲ್ಲಿ ಎರಡು ಆಂಜನೇಯ ದೇವರು ಇರುವುದು ವಿಶೇಷ. ರಾಜರಿಗೆ ಅಷ್ಟೇ ಅಲ್ಲದೆ ವೈಷ್ಣವ ಸಂಪ್ರದಾಯಕ್ಕೂ ಈ ಗ್ರಾಮಕ್ಕೂ ಸಂಬಂಧವಿದೆ ಎನ್ನುತ್ತಾರೆ ಶ್ರೀ ಮಾರುತಿ ಸೇವಾ ಸಮಿತಿ ಅಧ್ಯಕ್ಷ ಕುರ್ಕೆ ತಿಪ್ಪೇಶಪ್ಪ.

**ಗ್ರಾಮದ ಇತಿಹಾಸ:** ಕ್ರಿಸ್ತಪೂರ್ವ 160ರಲ್ಲಿ ಉತ್ತರದಿಂದ ಬಂದ ರಾಜಪರಮೇಶ್ವರ ರಾಯನ ಮಗ ನೀಲಶೇಖರಾಯ ರಾಜನಿಂದ ನೀಲಾವತಿ ಪಟ್ಟಣ ಎಂದು ಹೆಸರು ಇತಿಹಾಸದಲ್ಲಿ ಪ್ರಸಿದ್ಧವಾಗಿತ್ತು. ಈ ಗ್ರಾಮ ಒಂದು ಕಾಲದಲ್ಲಿ ಸುತ್ತಲಿನ 34 ಹಳ್ಳಿಗಳಿಗೂ ರಾಜಧಾನಿಯಾಗಿತ್ತು ಎಂದು ಇಲ್ಲಿನ ಶಾಸನಗಳು ಉಲ್ಲೇಖಿಸಲಾಗಿದೆ. ನಂತರ ಈ ಗ್ರಾಮ ಗಂಗರು, ಚೋಳರ, ಹೊಯ್ಸಳರ ಹಾಗೂ ವಿಜಯನಗರ ಸಾಮ್ರಾಜ್ಯದ ಆಳ್ವಿಕೆಗೂ ಒಳಪಟ್ಟಿತ್ತು ಎಂಬುದಕ್ಕೆ ಇಲ್ಲಿನ ಸಿದ್ದೇಶ್ವರ ದೇಗುಲ ಸಾಕ್ಷಿಯಾಗಿದೆ. ಇಲ್ಲಿನ ಐತಿಹಾಸಿಕ ಎರಡು ದೇಗುಲಗಳು ಕೇಂದ್ರ ಪ್ರಾಕ್ತನ ಶಾಸ್ತ್ರ ವಿಭಾಗದಿಂದ ಸಾವಿರಾರು ಕೋಟಿ ವೆಚ್ಚದಲ್ಲಿ ಜೀರ್ಣೋದಾರಗೊಂಡಿದೆ

## ವೀರಶೈವ ಮಹಾಅಧಿವೇಶನ: ಯಶಸ್ವಿಗೊಳಿಸಲು ಮನವಿ



» **ಚಳ್ಳಕೆರೆ**

ಅಖಿಲ ಭಾರತ ವೀರಶೈವ ಲಿಂಗಾಯಿತ ಮಹಾಸಭಾದ ವತಿಯಿಂದ ದಾವಣಗೆರೆಯ ಎಂಬಿಎ ಕಾಲೇಜು ಮೈದಾನದಲ್ಲಿ 24ನೇ ಮಹಾಅಧಿವೇಶನ ಡಿ.23,24 ಎರಡು ದಿನಗಳ ಕಾಲ ನಡೆಯಲಿದ್ದು, ವೀರಶೈವ ಲಿಂಗಾಯಿತ ಸಮುದಾಯದ ಸಂಘಟನೆ ಮತ್ತು ಶ್ರೇಯೋಭಿವೃದ್ದಿಗೆ ಮಹಾಅಧಿವೇಶನದಲ್ಲಿ ಚರ್ಚಿಸಿ ನಿರ್ಣಯಕೈಗೊಳ್ಳಲಾಗುವುದು ಎಂದು ತಾಲ್ಲೂಕು ವೀರಶೈವ ಸೇವಾ ಸಮಾಜದಅಧ್ಯಕ್ಷಹಾಗೂನಗರಸಭಾಸದಸ್ಯಕೆ.ಸಿ.ನಾಗರಾಜುತಿಳಿಸಿದರು. ಅವರು, ಮಂಗಳವಾರ ವೀರಶೈವ ಕಲ್ಯಾಣ ಮಂಟಪದ ಮುಂಭಾಗದಲ್ಲಿ ಮಹಾಅಧಿವೇಶನ ಹಿನ್ನೆಲೆ ಹಮ್ಮಿಕೊಂಡಿರುವ ಪ್ರಚಾರರಥಕ್ಕೆ ಚಾಲನೆ ನೀಡಿ ಮಾತನಾಡಿದರು. ಈ ರಥವೂ ತಾಲ್ಲೂಕಿನಾದ್ಯಂತ ಸಂಚರಿಸಿ ವೀರಶೈವ ಬಂಧುಗಳು ಮಹಾಅಧಿವೇಶನದಲ್ಲಿ ಭಾಗವಹಿಸಲು ಮನವಿಯೊಂದಿಗೆ ಜಾಗೃತಿ ಮೂಡಿಸುವುದಾಗಿದೆ. ರಾಜ್ಯದಲ್ಲಿ ವೀರಶೈವ ಸಮಾಜದ ಪ್ರಬಲ ಸಮಾಜವಾಗಿದ್ದು, ರಾಜಕೀಯ ಕ್ಷೇತ್ರವೂ ಸೇರಿದಂತೆ ಬೇರೆ ಎಲ್ಲಾ ಕ್ಷೇತ್ರಗಳಲ್ಲಿ ಈ ಸಮಾಜಕ್ಕೆ ಸೂಕ್ತಪ್ರಾತಿನಿತ್ಯ ಸಿಗುತ್ತಿಲ್ಲ. ಈ ಹಿನ್ನೆಲೆಯಲ್ಲಿ ಅಖಿಲ ಭಾರತ ವೀರಶೈವ ಮಹಾಸಭಾದ ಅಧ್ಯಕ್ಷ, ಶಾಸಕ ಶಾಮನೂರುಶಿವಶಂಕರಪ್ಪನವರ ಮಾರ್ಗದರ್ಶನದಲ್ಲಿ ಈ ಕಾರ್ಯಕ್ರಮವನ್ನು ಹಮ್ಮಿಕೊಂಡಿದೆ ಎಂದರು.

ಸಂಘದ ಉಪಾಧ್ಯಕ್ಷ ಕೆ.ಎಂ.ಜಗದೀಶ್, ಪ್ರಧಾನ ಕಾರ್ಯದರ್ಶಿ ಎಚ್.ವಿ.ಪ್ರಸನ್ನಕುಮಾರ್, ಕೆ.ನಾಗೇಶ್, ಹೊಟ್ಟಪ್ಪನಹಳ್ಳಿಪ್ರಸನ್ನ, ವಿಜಯಕುಮಾರ್, ರೇವಣ್ಣ, ಜೆ.ಆನಂದ್, ಮನುನಾಡಿಗ್, ಶ್ರೀಹರ್ಷ, ಕೆ.ಎಂ.ಕೋಟ್ರೇಶ್, ವಂದನರಾಜು, ಡಾ.ಕೆ.ಎಂ.ಜಯಕುಮಾರ್, ರವಿಶಂಕರ್, ಬಸವರಾಜಯ್ಯ, ಬಿ.ಪಿ.ಓಂಕಾರಪ್ಪ, ಕೆ.ಎಸ್.ಕಲ್ಮೂರ್, ಬಿ.ಎಸ್.ಶಿವಪುತ್ರಪ್ಪ, ಎಚ್.ಗಂಗಣ್ಣ, ಶಿವಪ್ರಕಾಶ್ ಮುಂತಾದವರು ಉಪಸ್ಥಿತರಿದ್ದರು.

## ರಾಷ್ಟ್ರೀಯ ಭಾವನೆ ಅರಳಿಸುವಲ್ಲಿ ಸೇವಾದಳದ ಕಾರ್ಯ ಅಭಿನಂದನೀಯ

» **ಚಳ್ಳಕೆರೆ**

ರಾಜ್ಯದ ಭಾರತ ಸೇವಾದಳಕ್ಕೆ ತನ್ನದೇಯಾದ ಇತಿಹಾಸವಿದೆ. ಸೇವಾದಳದ ಮೂಲ ಉದ್ದೇಶದ ಎಲ್ಲರಲ್ಲೂ ಶಿಸ್ತು ಮತ್ತು ಸೇವಾಮನೋಭಾವನೆ ಮೂಡಿಸುವುದು. ವಿಶೇಷವಾಗಿ ಸೇವಾದಳದಲ್ಲೇ ಶಿಕ್ಷಕ, ಶಿಕ್ಷಕಿಯರು ತರಬೇತಿ ಪಡೆದು ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಗೆ ತನ್ನದೇಯಾದ ದಾಟಿಯಲ್ಲಿ ಪ್ರಾಮಾಣಿಕ ಪ್ರಯತ್ನ ನಡೆಸಬೇಕು. ಭಾರತ ಸೇವಾದಳ ಶಿಕ್ಷಣ ಇಲಾಖೆಗೆ ನಿರಂತರ ಕೊಡುಗೆ ನೀಡುತ್ತಾ ಬಂದಿದೆ ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಕೆ.ಎಸ್.ಸುರೇಶ್ ತಿಳಿಸಿದರು.

ಅವರು, ನಗರದ ಬಿಇಒ ಕಚೇರಿ ಆವರಣದಲ್ಲಿ ಹಮ್ಮಿಕೊಂಡಿದ್ದ ಒಂದು ದಿನದ ಭಾರತ ಸೇವಾದಳ ತರಬೇತಿ ಪಡೆದ ಶಿಕ್ಷಕ,



ಶಿಕ್ಷಕಿಯರ ಪುನಶ್ಚೇತನ ಕಾರ್ಯಗಾರವನ್ನು ಉದ್ಘಾಟಿಸಿ ಮಾತನಾಡಿದರು. ಕಳೆದ ಹಲವಾರು ವರ್ಷಗಳಿಂದ ಭಾರತ ಸೇವಾದಳ ಶಿಕ್ಷಣ ಇಲಾಖೆಯಲ್ಲಿ ತನ್ನದೇಯಾದ ವಿಶೇಷತೆಯನ್ನು ಹೊಂದಿದೆ ಎಂದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಸೇವಾದಳದ ಸಂಪನ್ಮೂಲ ವ್ಯಕ್ತಿ ಅಣ್ಣಯ್ಯ, ಸೇವಾದಳದ ಮೂಲ ಉದ್ದೇಶ ವಿದ್ಯಾರ್ಥಿಗಳಲ್ಲಿ ರಾಷ್ಟ್ರೀಯತೆ ಭಾವನೆಯನ್ನು ಮೂಡಿಸುವುದಲ್ಲದೆ, ದೇಶಕ್ಕಾಗಿ ತ್ಯಾಗಮಾಡಿದ ಅನೇಕ ಮಹಾನೀಯರ ಬಗ್ಗೆ ಮಾರ್ಗದರ್ಶನ ನೀಡುವುದು. ವಿದ್ಯಾರ್ಥಿಗಳು ಉತ್ತಮ ಸನ್ಮಾರ್ಗ, ದೇಶಾಭಿಮಾನ, ಸೌಹಾರ್ಧತೆ, ಭಾವೈಕ್ಯತೆ, ಸೇವಾ ಮನೋಭಾವನೆ ಮುಂತಾದವುಗಳ ಬಗ್ಗೆ ಜಾಗೃತಿ ಮೂಡಿಸುವುದಾಗಿದೆ ಎಂದರು.

ದೈಹಿಕ ಶಿಕ್ಷಣ ನಿರ್ದೇಶಕ ಸುನೀಲ್‌ನಾಯ್ಕ, ದೈಹಿಕ ಶಿಕ್ಷಣ ತಾಲ್ಲೂಕು ಅಧ್ಯಕ್ಷ ಸಿದ್ದಲಿಂಗಪ್ಪ, ಸೇವಾದಳದ ತಾಲ್ಲೂಕು ಅಧ್ಯಕ್ಷ ಪ್ರಾಣೇಶ್, ಕಾರ್ಯದರ್ಶಿ ಮುರುಗೇಶ್, ಮಾರುತಿಭಂಡಾರಿ ಮುಂತಾದವರು ಉಪಸ್ಥಿತರಿದ್ದರು.

## ಪ್ರಮುಖ ಸುದ್ದಿ

### ಕಂದಾಯ ಇಲಾಖೆ ಅಧಿಕಾರಿಗಳಿಗೆ ಶಾಸಕ ಬಿ.ಜಿ.ಗೋವಿಂದಪ್ಪ ಸೂಚನೆ

# ಅರ್ಹರನ್ನು ಗುರುತಿಸಿ, ಬಗರ್ ಹುಕ್ಕುಂ ಜಮೀನು ನೀಡಿ

» **ಹೊಸದುರ್ಗ**

ವಿವಿಸಾಗರ ಹಿನ್ನೀರಿನಿಂದ ಜಮೀನು ಕಳೆದುಕೊಂಡವರು ಬಹುತೇಕ ಪರಿಶಿಷ್ಟ ಜಾತಿ, ಪಂಗಡ ಮತ್ತು ಹಿಂದುಳಿದ ವರ್ಗಕ್ಕೆ ಸೇರಿದ ಜನರೇ ಆಗಿದ್ದಾರೆ. ಹಿನ್ನೀರಿಗೆ ಜಮೀನು ಕಳೆದುಕೊಂಡು ನೊಂದಿರಿವ ಅರ್ಹ ಫಲಾನುಭವಿಗಳನ್ನು ಗುರುತಿಸಿ, ಬಗರ್ ಹುಕ್ಕುಂ ಸಾಗುವಳಿ ಭೂಮಿಯನ್ನು ನೀಡಬೇಕೆಂದು ಕಂದಾಯ ಇಲಾಖೆ ಅಧಿಕಾರಿಗಳಿಗೆ ಶಾಸಕ ಬಿ.ಜಿ.ಗೋವಿಂದಪ್ಪ ಸೂಚನೆ ನೀಡಿದರು.

ಪಟ್ಟಣದ ತಾ.ಪಂ. ಸಭಾಂಗಣದಲ್ಲಿ ಮಂಗಳವಾರ ಕಂದಾಯ ಇಲಾಖೆ ಮತ್ತು ಅರಣ್ಯ ಇಲಾಖೆ ಸಂಯುಕ್ತಾಶ್ರಯದಲ್ಲಿ ನಡೆದ ಬಗರ್ ಹುಕ್ಕುಂ ಸಮಿತಿ ಸಭೆಯ ಅಧ್ಯಕ್ಷತೆವಹಿಸಿ ಅವರು ಮಾತನಾಡಿದರು.

ಕಳೆದ ವರ್ಷ ಸುರಿದ ಅಧಿಕ ಮಳೆಯಿಂದಾಗಿ ವಿವಿ ಸಾಗರ ಜಲಾಶಯದಲ್ಲಿ ನೀರು ಹೆಚ್ಚಳವಾದರಿಂದ ಹಿನ್ನೀರಿಗೆ ಪೂಜಾರಹಟ್ಟಿ ಗ್ರಾಮದ ಬಹಳಷ್ಟು ಜನರ ಮನೆಗಳು ನೀರಿನಲ್ಲಿ ಮುಳುಗಿ ಹೋಗಿವೆ. ಮನೆ ಕಳೆದುಕೊಂಡ ಸಂತ್ರಸ್ತರಿಗೆ ಶೀಘ್ರವೇ ಸೈಟ್ ಮಾಡಿ, ಮನೆಗಳನ್ನು ನಿರ್ಮಾಣ ಮಾಡುವ ಮೂಲಕ ಮೂಲಸೌಕರ್ಯ ಒದಗಿಸುವ



ಕೆಲಸ ಪೂರ್ಣಗೊಳಿಸಬೇಕು. ಜಾನಕಲ್ ನಾಯಕರಹಟ್ಟಿ ಸಮೀಪದಲ್ಲಿ ಕೆಲವರು ಹಸಿರು ಕಲ್ಲು ಇದೆಯೆಂದು ಭೂಮಿಯನ್ನು ಬಗೆಯಲು ಪ್ರಯತ್ನ ಮಾಡುತ್ತಿರುವುದು ತಿಳಿದು ಬಂದಿದೆ. ಇದಕ್ಕೆ ಯಾವುದೇ ಕಾರಣಕ್ಕೂ ಅವಕಾಶ ಕೊಡಬಾರದು.

ಸರ್ಕಾರದ ಗಮನಕ್ಕೆ ತಂದು ನಿಯಮದಂತೆ ಮಾಡಿಕೊಳ್ಳಲಿ. ಅಕ್ರಮವಾಗಿ ಕಲ್ಲು ಬಗೆಯಲು ಅವಕಾಶ ಕೊಡಬಾರದೆಂದು ಹೇಳಿದರು.

ಶಿವನೇಕಟ್ಟೆ ಸರ್ವೆ ನಂಬರ್ ನಲ್ಲಿ ಅರ್ಹ ಫಲಾನುಭವಿಗಳನ್ನು ಗುರುತಿಸಿ ಬಗರ್ ಹುಕ್ಕುಂ ಭೂಮಿಯನ್ನು ನೀಡಬೇಕು. ಮತ್ತೊಬ್ಬರ ಒತ್ತಡಕ್ಕೆ ಮಣಿದು ಅರ್ಹರನ್ನು ಅನರ್ಹ, ಅನರ್ಹರನ್ನು ಅರ್ಹ ಫಲಾನುಭವಿಗಳನ್ನಾಗಿ ಮಾಡಿದರೆ, ನಾನು ಸುಮ್ಮನಿರಲಾರೆ. ಪಟ್ಟಣದ ಸಮೀಪವಿರುವುದರಿಂದ ಶಿವನೇಕಟ್ಟೆ ಸರ್ವೆ ನಂಬರ್ ಗೆ ಸಾಕಷ್ಟು ಬೇಡಿಕೆ ಇದೆ. ಹಾಗಾಗಿ, ಅರ್ಹ ಫಲಾನುಭವಿಗಳಿಗೆ ಸಿಗುವಂತೆ ನೋಡಿಕೊಳ್ಳಿ ಎಂದು ತಿಳಿಸಿದರು.

ಸಭೆಯನ್ನುದ್ದೇಶಿಸಿ ತಹಸೀಲ್ದಾರ್ ತಿರುಪತಿ ಪಾಟೀಲ್ ಮಾತನಾಡಿ, ಬಗರ್ ಹುಕ್ಕುಂ ಭೂಮಿಯನ್ನು ಉಳಿಮೆ ಮಾಡಿದ ಅರ್ಹ ಅನುಭವಗಳಿಗೆ ಸಾಗುವಳಿ ಚೀಟಿಯನ್ನು ನೀಡಬೇಕಾದರೆ, ಆಧಾರ್ ಕಾರ್ಡ್, ಕೆವೈಸಿ, ಪಡಿತರ ಚೀಟಿ, ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ವಾಸ ಸ್ಥಳ ನಕ್ಷೆಯನ್ನು ಕಡ್ಡಾಯವಾಗಿ ಪರಿಶೀಲಿಸಬೇಕು. ಸಾಗುವಳಿ ಜಮೀನನ್ನು ಪಡೆಯಲು ಅರ್ಹ ಫಲಾನುಭವಿಗಳೇ ಎಂದು ಸ್ವತಹ ಗ್ರಾಮ ಆಡಳಿತ ಅಧಿಕಾರಿಗಳೇ ಜಮೀನುಗಳಿಗೆ ಭೇಟಿ ನೀಡಿ ದೃಢಪಡಿಸಿಕೊಳ್ಳಬೇಕು. ಫಲಾನುಭವಿಗಳ ಎಲ್ಲಾ ದಾಖಲೆಗಳನ್ನು ತಂತ್ರಾಂಶದಲ್ಲಿ ಹಾಕಿ ಮಾಹಿತಿ ನೀಡಬೇಕೆಂದು ಗ್ರಾಮ ಆಡಳಿತ ಅಧಿಕಾರಿಗಳಿಗೆ ಮಾಹಿತಿ ನೀಡಿದರು.

ಜಮೀನು ಸಾಗುವಳಿ ಮಾಡಿರುವವರು ಪಕ್ಕದ ಜಮೀನುಗಳಿಗೆ ತೆರಳುವವರಿಗೆ ದಾರಿಗೆ ಅವಕಾಶ ಮಾಡಿಕೊಡಬೇಕು. ಶಾಸಕರ ಅಧ್ಯಕ್ಷತೆಯಲ್ಲಿ ವಾರದ ಪ್ರತಿ ಸೋಮವಾರದಂದು ಬಗರ್ ಹುಕ್ಕುಂ ಸಮಿತಿ ಸಭೆಯನ್ನು ಮಾಡಿ, ಅರ್ಜಿಗಳನ್ನು ಪರಿಶೀಲನೆ ಮಾಡಲಾಗುವುದು. ಅದರಂತೆಯೇ, ಗ್ರಾಮ ಪಂಚಾಯಿತಿ ಕೇಂದ್ರ ಸ್ಥಾನಗಳಲ್ಲಿ ಪ್ರತಿ ಮಂಗಳವಾರ ಜನರ ಸಮಸ್ಯೆ ಆಲಿಸಲಾಗುವುದು ಎಂದು ತಿಳಿಸಿದರು.

ಈ ವೇಳೆ ಸಭೆಯಲ್ಲಿ ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ, ಬಗರ್ ಹುಕುಂ ಕಮಿಟಿ ಸದಸ್ಯರಾದ ಐಲಾಪುರ ಮಲ್ಲಿಕಾರ್ಜುನ್, ಗಂಗೊಳ್ಳಿ ಮಹೇಶ್ , ರಾಜಸ್ವ ನಿರೀಕ್ಷಕರು ಮತ್ತು ತಾಲೂಕಿನ ಎಲ್ಲಾ ಗ್ರಾಮ ಆಡಳಿತ ಅಧಿಕಾರಿಗಳು ಇದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T